• ಮಂಡ್ಯ • ಮೈಸೂರು • ಚಾಮರಾಜನಗರ • ಹಾಸನ • ರಾಮನಗರ • ತುಮಕೂರು • ಬೆಂಗಳೂರು ಗ್ರಾಮಾಂತರ • ಬೆಂಗಳೂರು ನಗರ

ಕಾಯಕ ಯೋಗಿ

ಸಂಪಾದಕರು: ಅರುಣಜ್ಯೋತಿ ಬಿ.ಕೆ. KAYAKA YOGI- Regional Daily ಪ್ರಾದೇಶಿಕ ದಿನಪತ್ರಿಕೆ

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ MONDYA | ಸಂಪುಟ VOLUME 07 | ಸಂಚಿಕೆ ISSUE 50 | ಶುಕ್ರವಾರ FRIDAY | 31-05-2024 | ಪುಟಗಳು Pages 06 | ಬೆಲೆ Rates 02 | ಸಂಪರ್ಕ 9980605484

ಯತೀಂದ್ರ ಪರಿಷತ್ ಎಂಟ್ರಿಗೆ ಹೈಕಮಾಂಡ್ ಗ್ರೀನ್ ಸಿಗ್ನಲ್!

65 ಆಕಾಂಕ್ಷಿಗಳ ಶಾರ್ಟ್‌ಲಿಸ್ಟ್: ಡಿಕೆಶಿ

ಕಾಯಕಯೋಗಿ ಸುದ್ದಿ

ಬೆಂಗಳೂರು: ರಾಜ್ಯ ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆಯುವ ಚುನಾವಣೆಯಲ್ಲಿ ಸಿಎಂ ಸಿದ್ದರಾಮಯ್ಯ ಪುತ್ರ ಯತೀಂದ್ರ ಸ್ಪರ್ಧೆ ಖಚಿತವಾಗಿದೆ. ಉಪಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಗುರುವಾರ ಖಚಿತಪಡಿಸಿದ್ದಾರೆ.

ದ್ವೈವಾರ್ಷಿಕ ಚುನಾವಣೆಗೆ ಯತೀಂದ್ರ ಸ್ಪರ್ಧೆಗೆ ಹೈಕಮಾಂಡ್ ಸೂಚನೆ ನೀಡಿದೆ ಎಂದು ತಿಳಿಸಿದ್ದಾರೆ.

ಮಾಧ್ಯಮದವರೊಂದಿಗೆಗುರುವಾರಮಾತನಾಡಿದ ಡಿಕೆಶಿ, ದೆಹಲಿಗೆ ಹೋಗಿ ಪಟ್ಟಿ ನೀಡಿ ಬಂದಿದ್ದೇವೆ. 11 ಸ್ಥಾನಕ್ಕೆ 300 ಆಕಾಂಕ್ಷಿಗಳು ಇದ್ದರು. ನಾವು 65 ಮಂದಿಯ ಶಾರ್ಟ್‌ಲಿಸ್ಟ್ ಕೊಟ್ಟು ಬಂದಿದ್ದೇವೆ. ನಮ್ಮ ಅಭಿಪ್ರಾಯವನ್ನು ಹೇಳಿದ್ದೇವೆ. ಯತೀಂದ್ರ ಅವರದ್ದು ಮೊದಲೇ ಕಮಿಟ್ ಮೆಂಟ್ ಇದೆ. ಹಾಗಾಗಿ ಅವರಿಗೆ ಟಿಕೆಟ್ ನೀಡುವುದಕ್ಕೆ ಹೈಕಮಾಂಡ್ ಕೂಡ ಸಮ್ಮತಿ ನೀಡಿದೆ. ಇವರ ಜೊತೆಗೆ ವಿಧಾನಸಭಾ ಟಿಕೆಟ್ ತ್ಯಾಗ ಮಾಡಿದ ಹಿರಿಯರು, ಸೋತವರು ಇದ್ದಾರೆ. ಬೋಸುರಾಜ್ ವಿಚಾರ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ತಿಳಿಸಿದ್ದಾರೆ.

7 ಅಭ್ಯರ್ಥಿಗಳು ಗೆಲ್ಲುವ ಅವಕಾಶ

ಆಕಾಂಕ್ಷಿಗಳಲ್ಲಿ ಹೈದ್ರಾಬಾದ್ ಕರ್ನಾಟಕ , ಮುಂಬಯಿ ಕರ್ನಾಟಕ, ಬಯಲು ಸೀಮೆ ಎಲ್ಲಾ ಭಾಗದವರಿದ್ದಾರೆ. 21 ಮಂದಿ ಕರಾವಳಿ ಭಾಗದಲ್ಲಿ, 11 ಮಂದಿ ಮೈಸೂರು ಭಾಗದಲ್ಲಿ ಆಕಾಂಕ್ಷಿಗಳು ಇದ್ದಾರೆ ಎಂದು ಡಿಸಿಎಂ ತಿಳಿಸಿದ್ದಾರೆ. ಪರಿಷತ್ ಚುನಾವಣೆಯಲ್ಲಿ 11 ಕ್ಷೇತ್ರಗಳ ಪೈಕಿ ವಿಧಾನಸಭೆಯಲ್ಲಿನ ಸಂಖ್ಯಾಬಲ ಆಧಾರದಲ್ಲಿ ಪಕ್ಷಕ್ಕೆಗೆಲ್ಲುವ ಅವಕಾಶವಿರುವ



7 ಅಭ್ಯರ್ಥಿಗಳನ್ನು ಫೈನಲ್ ಮಾಡಲು ಕಸರತ್ತು ನಡೆದಿದೆ. ಮೂಲಗಳ ಪ್ರಕಾರಣ ಯತೀಂದ್ರ ಸೇರಿ 3 ಟಿಕೆಟ್ ಫೈನಲ್ ಆಗಿದ್ದು, ಉಳಿದ ನಾಲ್ಕು ಸ್ಥಾನಗಳಿಗೆ ಗೊಂದಲ ಮುಂದುವರಿದಿದೆ.

ಜೂನ್ 13 ರಂದು ಮತದಾನ ನಡೆಯಲಿದ್ದು, ನಾಮಪತ್ರ ಸಲ್ಲಿಸಲು ಜೂನ್ 3 ಕೊನೆಯ ದಿನವಾಗಿದೆ. ಕರ್ನಾಟಕ ವಿಧಾನಸಭೆಯಲ್ಲಿ 135 ಶಾಸಕರನ್ನು ಹೊಂದಿರುವ ಕಾಂಗ್ರೆಸ್ ಕನಿಷ್ಠ ಏಳು ಎಂಎಲ್‌ಸಿ ಸ್ಥಾನಗಳನ್ನು ಗೆಲ್ಲಬಹುದು. ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಶಿವಕುಮಾರ್ ಮಂಗಳವಾರದಿಂದಲೇ ದೆಹಲಿಯಲ್ಲಿ ಮೊಕ್ಕಾಂ ಹೂಡಿದ್ದು, ಪಟ್ಟಿಗೆ ಕಾಂಗ್ರೆಸ್ ಕೇಂದ್ರ ನಾಯಕರ ಒಪ್ಪಿಗೆ ಪಡೆದಿದ್ದಾರೆ. ಕರ್ನಾಟಕ ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜು ಅವರ ಮರುನಾಮಕರಣದ ಬಗ್ಗೆ ಕಾಂಗ್ರೆಸ್ ನಾಯಕತ್ವದಲ್ಲಿ ಭಿನ್ನಾಭಿಪ್ರಾಯವಿದೆ. ಹಿರಿಯ ಎಂಎಲ್‌ಸಿ ಬಿಕೆ ಹರಿಪ್ರಸಾದ್ ಅವರನ್ನು ಸಚಿವರನ್ನಾಗಿಸುವ ಮೂಲಕ ಅವರನ್ನು ಕಣಕ್ಕಿಳಿಸಲು ಶಿವಕುಮಾರ್ ಬಯಸಿದ್ದಾರೆ ಎನ್ನಲಾಗಿದೆ.

ಶಾರ್ಟ್‌ಲಿಸ್ಟ್‌ನಲ್ಲಿರುವ ಪ್ರಮುಖರು

ಶಾರ್ಟ್‌ಲಿಸ್ಟ್‌ನಲ್ಲಿ ಡಾ.ಯತೀಂದ್ರ ಸಿದ್ದರಾಮಯ್ಯ, ಎನ್.ಎಸ್.ಬೋಸರಾಜು, ರಮೇಶ್ ಬಾಬು, ಕೆ.ಪಿ.ನಂಜುಂಡಿ, ಬಿ.ವಿ.ಶ್ರೀನಿವಾಸ್, ಎಂ.ವೆಂಕಟೇಶ್, ಕೆ.ಗೋವಿಂದರಾಜು, ವಿನಯ್ ಕಾರ್ತಿಕ್, ಎ.ಎನ್.ನಟರಾಜ್ ಗೌಡ, ನಂಜಯ್ಯಮುತ್ತು, ವೀಣಾ ಕಾಶಪ್ಪನವರ್, ವಸಂತಕುಮಾರ್, ಬಸವರಾಜು, ಪುಷ್ಪಾ ಅಮರನಾಥ್, ಮುದ್ದುರಂಗ, ಮುದ್ದುಧರ ಬಿ.ಸಿ. ಎಸ್.ಎ.ಹುಸೇನ್, ತಮಟಗಾರ, ಐವನ್ ಡಿಸೋಜಾ, ರಮೇಶ್ ಕುಮಾರ್, ಮತ್ತು ವಿಜಯ್ ಮುಳಗುಂದ ಅವರ ಹೆಸರುಗಳಿವೆ ಎಂದು ಮೂಲಗಳು ತಿಳಿಸಿವೆ.

ಯಾರನ್ನು ರಕ್ಷಣೆ ಮಾಡುವುದಿಲ್ಲ

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಬೆನ್ನಲ್ಲೇ ಪ್ರತಿಪಕ್ಷಗಳು ಸಚಿವ ನಾಗೇಂದ್ರ ರಾಜೀನಾಮೆಗೆ ಬಿಜೆಪಿ ಪಟ್ಟು ವಿಚಾರವಾಗಿ ಪ್ರತಿಕ್ರಿಯಿಸಿ, ಯಾರೇ ತಪ್ಪು ಮಾಡಿದ್ರೂ ತಪ್ಪೇ. ಅಧಿಕಾರಿಗಳ ಸಸ್ಪಂಡ್ ಮಾಡಲಾಗಿದೆ. ಬಹಳ ಗೌರವದಿಂದ ಯಾವ ರೀತಿ ಮಾಡಬೇಕೋ ಮಾಡ್ತೇವೆ. ಸಿಎಂ ಈ ವಿಚಾರವಾಗಿ ಗಮನ ಹರಿಸಿದ್ದಾರೆ. ಯಾರನ್ನೂ ರಕ್ಷಣೆ ಮಾಡುವ ಸಂದರ್ಭ ಇದಲ್ಲ. ಅದು ಕೋಟಿ ವ್ಯವಹಾರವಾಗಿರಬಹುದು ಅಥವಾ 10ಲಕ್ಷ ಇದ್ರೂ ಕೂಡ ಕ್ರಮ ತೆಗೆದುಕೊಳ್ತೇವೆ. ನಾನೂ ಕೂಡ ಎಫ್‌ಐಆರ್ ದ್ದೇನೆ. ಸಚಿವರಿಂದ ರಿಪೋರ್ಟ್ ಕೇಳುತ್ತೇವೆ. ಪ್ರಕರಣ ಸಂಬಂಧ ಸಂಜೆ ವೇಳೆಗೆ ಮಾಹಿತಿ ಸಿಗುತ್ತದೆ ಎಂದರು.

ವಾಲ್ಮೀಕಿ ನಿಗಮದಲ್ಲಿ ಅಕ್ರಮ

ಆರೋಪ ಸಾಬೀತಾದರೆ ಸಚಿವರು ರಾಜೀನಾಮೆ: ಸಚಿವ ಪರಮೇಶ್ವರ್

ಕಾಯಕಯೋಗಿ ಸುದ್ದಿ

ಬೆಂಗಳೂರು: ಅಧಿಕಾರಿ ಚಂದ್ರಶೇಖರ್ ಸಾವಿಗೆ ಕಾರಣರಾದವರಿಗೆ ಮತ್ತು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಅವ್ಯವಹಾರ ಆರೋಪ ಎರಡೂ ಆಯಾಮದಲ್ಲಿ ಸಿಐಡಿ ತನಿಖೆ ನಡೆಸಲಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದರು.



ಆತ್ಮಹತ್ಯೆ ಮಾಡಿಕೊಂಡಿರುವ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರ್ ಅವರ ಶಿವಮೊಗ್ಗದ ವಿನೋಬ ನಗರದಲ್ಲಿರುವ ನಿವಾಸಕ್ಕೆ ಭೇಟಿ ನೀಡಿ, ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಬಳಿಕ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದರು.

"ಮೃತರಾಗಿರುವ ಅಧೀಕ್ಷಕ ಚಂದ್ರಶೇಖರ್ ಅವರ ಆತ್ಮಕ್ಕೆ ಶಾಂತಿ ಕೋರುತ್ತೇನೆ. ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ಕರುಣಿಸಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ. ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಹಣಕಾಸಿನ ಅವ್ಯವಹಾರ ನಡೆದಿದೆ ಎಂಬ ಆರೋಪ ಕೇಳಿ ಬಂದಿದೆ. ಪ್ರಕರಣದ ತನಿಖೆಯನ್ನು ಸಿಐಡಿಗೆ ವಹಿಸಲಾಗಿದ್ದು, ಏನು ನಡೆದಿದೆ ಎಂಬ ಸತ್ಯಾಂಶ ಪತ್ತೆ ಮಾಡಲಿದ್ದಾರೆ" ಎಂದು ತಿಳಿಸಿದರು.

"ಬೇರೆ ಬೇರೆ ಖಾತೆಗಳಿಗೆ ಕೋಟ್ಯಂತರ ರೂ. ವರ್ಗಾವಣೆಯಾಗಿದೆ ಎಂಬ ಆರೋಪವಿದೆ. ಚಂದ್ರಶೇಖರ್ ಅಲ್ಲಿ ಕೆಲಸ ಮಾಡುತ್ತಿದ್ದರು. ಇದಕ್ಕೆ ಅವರ ಮೇಲೆ ಏನಾದರೂ ಒತ್ತಡವಿತ್ತೆ ಎಂಬುದನ್ನು ಈಗಲೇ ಹೇಳಲು ಬರುವುದಿಲ್ಲ. ತನಿಖೆಯ ನಂತರ ಸತ್ಯಾಂಶ ಗೊತ್ತಾಗಲಿದೆ" ಎಂದರು.

"ಚಂದ್ರಶೇಖರ್‌ನನ್ನು ಕಳೆದುಕೊಂಡಿರುವ ಕುಟುಂಬಸ್ಥರು ನೋವನ್ನು ಅನುಭವಿಸುತ್ತಿದ್ದಾರೆ. ಕೋವಿಡ್ ಸಂದರ್ಭದಲ್ಲಿ ಮೂರು ತಿಂಗಳು ಚಿಕಿತ್ಸೆ ಪಡೆದು ಗುಣಮುಖರಾಗಿದ್ದರು. ಒಡವೆ ಅಡವಿಟ್ಟು ಆತನ ಜೀವ ಉಳಿಸಿಕೊಂಡಿದ್ದರು. ವಿಧಿ ಈ ರೀತಿ ಮಾಡುತ್ತದೆ ಎಂದು ಭಾವಿಸಿರಲಿಲ್ಲ. ಕುಟುಂಬದ ಪರಿಸ್ಥಿತಿಯನ್ನು ಪತ್ನಿ ಅಳಲು ತೋಡಿಕೊಂಡರು. ಸರ್ಕಾರ ನೊಂದ ಕುಟುಂಬದ ಪರ ನಿಲ್ಲಲಿದೆ. ಜೂನ್ 6ರ ನಂತರ ಪರಿಹಾರ ಕಲ್ಪಿಸಲಾಗುವುದು" ಎಂದು ತಿಳಿಸಿದರು.

ಸಚಿವ ನಾಗೇಂದ್ರ ಅವರು ನೈತಿಕ ಹೊಣೆಹೊತ್ತು ರಾಜೀನಾಮೆ ನೀಡಬೇಕು ಎಂಬ ಬಿಜೆಪಿಯವರ ಒತ್ತಾಯದ ಕುರಿತು ಪ್ರತಿಕ್ರಿಯಿಸಿದ ಅವರು, "ಆರೋಪ ಸಾಬೀತಾದರೆ ರಾಜೀನಾಮೆ ನೀಡುತ್ತಾರೆ. ಅದಕ್ಕಾಗಿಯೇ ತನಿಖೆ ನಡೆಸಲಾಗುತ್ತಿದೆ. ಸತ್ಯ ಏನೆಂಬುದು ಹೊರಬರುತ್ತದೆ" ಎಂದರು.

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪ್ರಸನ್ನ ಕುಮಾರ್, ಮಾಜಿ ಸಂಸದರಾದ ಆಯನೂರು ಮಂಜುನಾಥ್, ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರವಿ ಕುಮಾರ್, ಮುಖಂಡರಾದ ಯೋಗೇಶ್, ಶಿವಕುಮಾರ್ ಇದ್ದರು.

ಅಧಿಕಾರಕ್ಕೆ ಬಂದರೆ ಕೃಷಿ ಸಾಲ ಮನ್ನಾ: ರಾಹುಲ್ ಗಾಂಧಿ



ಬೆಂಗಳೂರು: ಇಂಡಿಯಾ ಒಕ್ಕೂಟವು ಅಧಿಕಾರಕ್ಕೆ ಬಂದರೆ ಕೃಷಿ ಸಾಲ ಮನ್ನಾ ಮಾಡುತ್ತದೆ ಮತ್ತು ಕನಿಷ್ಠ ಬೆಂಬಲ ಬೆಲೆಗೆ (ಎಂಎಸ್‌ಪಿ) ಕಾನೂನು ಖಾತರಿ ನೀಡುತ್ತದೆ, ಅಗ್ನಿಪಥ್ ಯೋಜನೆಯನ್ನು ರದ್ದುಗೊಳಿಸುತ್ತದೆ ಎಂದು ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಭರವಸೆ ನೀಡಿದ್ದಾರೆ.

ಪಕ್ಷದ ಲೂಧಿಯಾನ ಅಭ್ಯರ್ಥಿ ಮತ್ತು ಪಂಜಾಬ್ ಕಾಂಗ್ರೆಸ್ ಮುಖ್ಯಸ್ಥ ಅಮರಿಂದರ್ ಸಿಂಗ್ ರಾಜಾ ವಾರಿಂಗ್ ಪರವಾಗಿ ಲುಧಿಯಾನದ ಮುಲ್ಲನ್‌ಪುರ್ ದಖಾದಲ್ಲಿ ಚುನಾವಣಾ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ರಾಹುಲ್, "ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನವನ್ನು ರದ್ದುಪಡಿಸಲಿದೆ" ಎಂದು ಎಂದು ಆರೋಪಿಸಿದ್ದು, "2024ರ ಲೋಕಸಭೆ ಚುನಾವಣೆಯು ಸಂವಿಧಾನವನ್ನು ಉಳಿಸಲು ನಡೆಯುತ್ತಿರುವ ಚುನಾವಣೆ" ಎಂದರು.

"ಮೊದಲ ಬಾರಿಗೆ, ಒಂದು ಪಕ್ಷ ಮತ್ತು ಅದರ ನಾಯಕರು ಚುನಾವಣೆಯಲ್ಲಿ ಗೆದ್ದರೆ ಸಂವಿಧಾನವನ್ನು ಬದಲಾಯಿಸುತ್ತೇವೆ ಮತ್ತು ರದ್ದುಗೊಳಿಸುತ್ತೇವೆ ಎಂದು ಹೇಳಿದ್ದಾರೆ" ಎಂದು ಬಿಜೆಪಿ ನಾಯಕರುಗಳ ಸಂವಿಧಾನ ಬದಲಾಯಿಸುವ ಹೇಳಿಕೆ ಬಗ್ಗೆ ಮಾತನಾಡಿದ ರಾಹುಲ್ ಗಾಂಧಿ ಸಂವಿಧಾನದ ಪ್ರತಿಯನ್ನು ಹಿಡಿದು, ಇದು ಪುಸ್ತಕವಲ್ಲ, ಜನರ ಧ್ವನಿ ಎಂದು ಹೇಳಿದರು.

ಪ್ರಜ್ವಲ್ 'ರಾಜತಾಂತ್ರಿಕ ಪಾಸ್ ಪೋರ್ಟ್' ರದ್ದತಿಗೆ ನೋಟಿಸ್

ಬೆಂಗಳೂರು: ಮಹಿಳೆಯರಿಗೆ ಲೈಂಗಿಕ ದೌರ್ಜನ್ಯವೆಸಗಿದ ಆರೋಪದ ಮೇಲೆ ಅಮಾನತುಗೊಂಡಿರುವ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಗೊಳಿಸಲು ವಿದೇಶಾಂಗ ಸಚಿವಾಲಯ ನೀಡಿರುವ ಶೋಕಾಸ್ ನೋಟಿಸ್‌ಗೆ ಪ್ರತಿಕ್ರಿಯೆ ನೀಡಲು ಜೂನ್ 2 ರವರೆಗೆ ಸಮಯಾವಕಾಶವಿದೆ.

ಪ್ರಜ್ವಲ್ ರೇವಣ್ಣ ಇಂದು ಬೆಂಗಳೂರಿಗೆ ಮರಳುತ್ತಿರುವಂತೆಯೇ ವಿದೇಶಾಂಗ ಸಚಿವಾಲಯ ಈ ವಿಷಯ ತಿಳಿಸಿದೆ. ಲೈಂಗಿಕ ದೌರ್ಜನ್ಯ ಆರೋಪದ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಮನವಿಯಂತೆ ರಾಜ–ತಾಂತ್ರಿಕ ಪಾಸ್‌ಪೋರ್ಟ್ ನ್ನು ಏಕೆ ರದ್ದುಗೊಳಿಸಬಾರದು ಎಂದು ಕೇಳಿ ಮೇ 23 ರಂದು ಪ್ರಜ್ವಲ್ ರೇವಣ್ಣ ಅವರಿಗೆ ಒಇಂ ನೋಟಿಸ್ ನೀಡಿದೆ.

ಮೇ 21 ರಂದು ಕರ್ನಾಟಕ ಸರ್ಕಾರದಿಂದ ಮನವಿ ಸ್ವೀಕರಿಸಲಾಗಿದ್ದು, ಭಾರತೀಯ ಪಾಸ್ ಪೋರ್ಟ್ ಕಾಯ್ದೆ ಪ್ರಕಾರ, ಪ್ರಜ್ವಲ್ ರೇವಣ್ಣ ಅವರ ರಾಜತಾಂತ್ರಿಕ ಪಾಸ್ ಪೋರ್ಟ್ ರದ್ದುಗೊಳಿಸುವ ಕ್ರಮವನ್ನು ಪ್ರಾರಂಭಿಸಿದ್ದೇವೆ. ಮೇ 23 ರಂದೇ ಅವರಿಗೆ ಶೋಕಾಸ್ ನೋಟಿಸ್ ನೀಡಿದ್ದು, 10 ದಿನಗಳೊಳಗೆ ಅವರು ಪ್ರತಿಕ್ರಿಯೆ ನೀಡಬೇಕು. ಅವರ ಉತ್ತರಕ್ಕಾಗಿ ಕಾಯುತ್ತಿದ್ದೇವೆ. ಗಡುವು ಮುಗಿದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಒಇಂ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ.

ಕರ್ನಾಟಕ ಸರ್ಕಾರದಿಂದ ಪತ್ರ ಬಂದ ನಂತರ ಪ್ರಜ್ವಲ್ ಅವರ ಪಾಸ್‌ಪೋರ್ಟ್ ರದ್ದುಗೊಳಿಸುವ ಪ್ರಕ್ರಿಯೆಯನ್ನು ವಿದೇಶಾಂಗ ಸಚಿವಾಲಯ ಪ್ರಾರಂಭಿಸಿದೆ.

'ತಂಬಾಕು ನಿಯಂತ್ರಣಕ್ಕೆ ಹಲವು ಕ್ರಮ'

ಕಾಯಕಯೋಗಿ ಸುದ್ದಿ

ಬೆಂಗಳೂರು: ಜಿಲ್ಲೆಯಾದ್ಯಂತ ತಂಬಾಕು ಬಳಕೆ ನಿಯಂತ್ರಿಸಲು ಹಲವು ಕ್ರಮಗಳ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ ಜಿಲ್ಲೆಯನ್ನು ತಂಬಾಕು ಮುಕ್ತ ಜಿಲ್ಲೆಯನ್ನಾಗಿ ಮಾಡಲು ಕ್ರಮವಹಿಸಲಾಗುವುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ.ಎನ್. ಶಿವಶಂಕರ್ ಅವರು ತಿಳಿಸಿದರು.

ಪ್ರತಿ ವರ್ಷ ಮೇ 31ರಂದು "ವಿಶ್ವ ತಂಬಾಕು ರಹಿತ ದಿನಾಚರಣೆಯನ್ನು ವಿಶ್ವದಾದ್ಯಂತ ಆಚರಿಸಲಾಗುತ್ತಿದೆ. "ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳನ್ನು ರಕ್ಷಿಸುವುದು" ಈ ವರ್ಷದ ವಿಶ್ವ ತಂಬಾಕು ರಹಿತ ದಿನಾಚರಣೆಯ ಧ್ಯೇಯ ವಾಕ್ಯ.



ಈ ಹಿನ್ನೆಲೆಯಲ್ಲಿ ಮೇ 31 ರಿಂದ ಜೂನ್ 30ರವರೆಗೆ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ತಂಬಾಕು ನಿಯಂತ್ರಣ ಘಟಕ ಹಾಗೂ ರಾಷ್ಟ್ರೀಯ ಬಾಯಿ ಆರೋಗ್ಯ ಕಾರ್ಯಕ್ರಮದ ಜಂಟಿ ಸಹಭಾಗಿತ್ವದೊಂದಿಗೆ ಹಲವು ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು.

ಈ ಕಾರ್ಯಕ್ರಮದ ಸದುದ್ದೇಶ ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚು ಜಾಗೃತಿ ಮೂಡಿಸುವುದು ಹಾಗೂ ಮಕ್ಕಳ ಆರೋಗ್ಯ ಮತ್ತು ಉಜ್ವಲ ಭವಿಷ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಮಕ್ಕಳು ತಂಬಾಕು ವ್ಯಸನಿಗಳಾಗದಂತೆ ತಡೆಯುವುದು ಅತೀ ಮುಖ್ಯವಾಗಿರುತ್ತದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿರುವ ಎಲ್ಲಾ ಶಾಲಾ/ ಕಾಲೇಜು/ ವಿಶ್ವವಿದ್ಯಾಲಯಗಳನ್ನು ತಂಬಾಕು ಮುಕ್ತ ಶೈಕ್ಷಣಿಕ ಸಂಸ್ಥೆಗಳೆಂದು ಘೋಷಿಸಲು ಹಾಗೂ ಅಔಖಿಕಂ ಖಜಛಿ 6ಛಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವ ನಿಟ್ಟಿನಲ್ಲಿ ಎಲ್ಲಾ ಶೈಕ್ಷಣಿಕ ಸಂಸ್ಥೆಗಳ ಸುತ್ತ 100 ಗಜ ಅಂತರದಲ್ಲಿ ತಂಬಾಕು ವ್ಯಾಪಾರ ಮಾಡುವವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕೆಂದು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ.

"ವಿಶ್ವ ತಂಬಾಕು ರಹಿತ ದಿನ"ವನ್ನು ಆಚರಿಸುವ ಅಂಗವಾಗಿ ಮುಂಬರುವ ದಿನಗಳಲ್ಲಿ ಜಿಲ್ಲೆಯ ಎಲ್ಲಾ ಸರ್ಕಾರಿ ಕಛೇರಿಗಳನ್ನು "ತಂಬಾಕು ಮುಕ್ತ ಕಛೇರಿ ಎಂದು ಘೋಷಿಸಲು ಕ್ರಮ ವಹಿಸುವಂತೆ ಎಲ್ಲಾ ಇಲಾಖೆಯ ಮುಖ್ಯಸ್ಥರಿಗೆ ಹಾಗೂ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಮಹಾನಗರ ಪಾಲಿಕೆಗಳು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಲ್ಲಿ ಅಂಗಡಿ ಮಾಲೀಕರುಗಳು ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡಲು ಪ್ರತ್ಯೇಕವಾದ ಪರವಾನಗಿಯನ್ನು ಪಡೆಯುವಂತೆ ಮತ್ತು ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಪುರಸಭೆ ಹಾಗೂ ಪಟ್ಟಣ ಪಂಚಾಯ್ತಿಗಳಲ್ಲಿ ಈ ಆದೇಶವನ್ನು ಅನುಷ್ಠಾನಗೊಳಿಸುವಂತೆ ಪುರಸಭೆ ಮತ್ತು ಪಟ್ಟಣ ಪಂಚಾಯತ್ ಅಧಿಕಾರಿಗಳಿಗೆ ಈಗಾಗಲೇ ಆದೇಶಿಸಲಾಗಿದೆ.

ಈ ಎಲ್ಲಾ ಚಟುವಟಿಕೆಗಳನ್ನು ಮುಂದಿನ ದಿನಗಳಲ್ಲಿ ಮತ್ತಷ್ಟು ಕಟ್ಟುನಿಟ್ಟಾಗಿ ಕಾರ್ಯರೂಪಕ್ಕೆ ತರುವ ಉದ್ದೇಶ ನಮ್ಮದಾಗಿರುತ್ತದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ತಂಬಾಕು ತನಿಖಾದಳ ಅಧ್ಯಕ್ಷರಾದ ಡಾ.ಎನ್ ಶಿವಶಂಕರ ಅವರು ತಿಳಿಸಿದ್ದಾರೆ.

'ಸಿದ್ದರಾಮಯ್ಯ, ಡಿ.ಕೆ ಶಿವಕುಮಾರ್ ವಿರುದ್ಧ ಕೇರಳದಲ್ಲಿ ಮಾಟ ಮಂತ್ರ'

ಬೆಂಗಳೂರು: ನನ್ನ ಹಾಗೂ ಮುಖ್ಯಮಂತ್ರಿಗಳ ವಿರುದ್ಧ ಕೇರಳದಲ್ಲಿ ತಂತ್ರಿಗಳನ್ನು ಬಳಸಿಕೊಂಡು "ಶತ್ರು ಭೈರವಿ ಯಾಗ" ಪ್ರಯೋಗ ನಡೆಸಲಾಗುತ್ತಿದೆ. ಈ ಬಗ್ಗೆ ನಾವು ತಲೆಕೆಡಿಸಿಕೊಳ್ಳುವುದಿಲ್ಲ. ನಾವು ನಂಬಿರುವ ಶಕ್ತಿ, ದೇವರು ಹಾಗೂ ಜನರ ಆಶೀರ್ವಾದ ನಮ್ಮನ್ನು ಕಾಪಾಡಲಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಈ ಕುರಿತು ಸದಾಶಿವನಗರ ನಿವಾಸದಲ್ಲಿ ಮಾಧ್ಯಮಗಳ ಜತೆ

ಕಾಯಕಯೋಗಿ

31-05-2024
ಶುಕ್ರವಾರ



ಮಂಡ್ಯ : ಜಿಲ್ಲಾಧಿಕಾರಿ ಡಾ. ಕುಮಾರ ಅವರು ಜೂನ್ 4 ರಂದು ಮಂಡ್ಯ ವಿಶ್ವವಿದ್ಯಾಲಯದಲ್ಲಿ ನಡೆಯಲಿರುವ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಎಣಿಕೆ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಹೆಚ್ ಎಲ್ ನಾಗರಾಜು, ಚುನಾವಣಾ ತಹಶೀಲ್ದಾರ್ ವೆಂಕಟಾಚಲಪತಿ, ದೀಪಕ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.



ಭಾರತ್ ಸೇವಕ ಸಮಾಜ್, ಭಾರತ ಸರ್ಕಾರ, ಹಾಗೂ ರಾಷ್ಟ್ರೀಯ ಸೇವಾ ಯೋಜನೆ, ಮಂಡ್ಯ ವಿಶ್ವವಿದ್ಯಾನಿಲಯ ಹಾಗೂ ವಿಶ್ವಮಾನವ ಹಕ್ಕುಗಳ ಸೇವಾ ಪ್ರತಿಷ್ಠಾನ, ಮಂಡ್ಯ ಶಾಖೆ, ಇವರುಗಳ ಸಂಯುಕ್ತ ಆಶ್ರಯದಲ್ಲಿ ಮಂಡ್ಯದ ಡಾ.ಬಿ ಆರ್. ಅಂಬೇಡ್ಕರ್ ಭವನದಲ್ಲಿ ನಡೆದ ಜನತಾ ಚಳುವಳಿಯಾಗಿ ಮಾನವ ಹಕ್ಕುಗಳು ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಜಿ ರಮಾ ಉದ್ಘಾಟಿಸಿದರು.

ವಿಶ್ವ ಪರಿಸರ ದಿನದ ನಿಮಿತ್ತ ಜಾಗೃತಿ ಕಾರ್ಯಕ್ರಮ

ಮಂಡ್ಯ: ಜಿಲ್ಲಾಡಳಿತ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪರಿಸರ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ವತಿಯಿಂದ 'ನಮ್ಮ ಭೂಮಿ ನಮ್ಮ ಭವಿಷ್ಯ' ಎಂಬ ಘೋಷವಾಕ್ಯದಡಿ ವಿಶ್ವ ಪರಿಸರ ದಿನ-2024 ನಿಮಿತ್ತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮೇ 31 ಬೆಳಿಗ್ಗೆ 10 ಗಂಟೆಗೆ ಶ್ರೀರಂಗಪಟ್ಟಣ ತಾಲ್ಲೂಕು ಪಶ್ಚಿಮವಾಹಿನಿಯ ಮಹಾತ್ಮಾಗಾಂಧಿ ಚಿತಾಭಸ್ಮ ಸ್ಮಾರಕದ ಬಳಿ ಕಾವೇರಿ ನದಿ ತಪ್ಪಲಿನ ಪ್ರದೇಶವನ್ನು ಶ್ರಮದಾನ ಹಮ್ಮಿಕೊಳ್ಳಲಾಗಿದೆ. ಜೂ.1ರಂದು ಬೆಳಿಗ್ಗೆ 9.30 ಗಂಟೆಗೆ ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಛೇರಿಯ ಕಾವೇರಿ ಉದ್ಯಾನದಲ್ಲಿ ಮಾಧ್ಯಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಚಿತ್ರಕಲಾ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ. ಜೂ.5ರಂದು ಮಂಡ್ಯ ಜಿಲ್ಲಾಧಿಕಾರಿ ಆವರಣದಿಂದ ಪರಿಸರ ಜಾಗೃತಿ ಕುರಿತು ಬೆಳಿಗ್ಗೆ 9.30 ಗಂಟೆಗೆ ಸೈಕಲ್ ಜಾಥಾ ಹಾಗೂ ಬೆಳಿಗ್ಗೆ 10.30 ಗಂಟೆಗೆ ಮಂಡ್ಯ ವಿಶ್ವವಿದ್ಯಾಲಯದ ಆವರಣದಲ್ಲಿ ಸಸ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ತರುವಾರ ಬೆಳಿಗ್ಗೆ 11.00 ಗಂಟೆಗೆ ಮಂಡ್ಯ ವಿಶ್ವವಿದ್ಯಾಲಯದ ಶಾರದಾ ಮಂದಿರದಲ್ಲಿ ಬಹುಮಾನ ವಿತರಣೆ ಮತ್ತು ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪರಿಸರ ಸಂಸ್ಥೆಯ ಅಧ್ಯಕ್ಷ ಮಂಗಲ ಎಂ.ಯೋಗೀಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು ತಮ್ಮ ವ್ಯಾಪ್ತಿಯೊಳಗಿನ ಕಬ್ಬನ್ನು ಮಾತ್ರ ಖರೀದಿಸಬೇಕು: ಡಿಸಿ ಡಾ.ಕುಮಾರ

ಕಾಯಕಯೋಗಿ ಸುದ್ದಿ

ಮಂಡ್ಯ: ಜಿಲ್ಲೆಯಲ್ಲಿರುವ 5 ಸಕ್ಕರೆ ಕಾರ್ಖಾನೆಗಳು ತಮಗೆ ನಿಗಧಿ ಮಾಡಿರುವ ವ್ಯಾಪ್ತಿಯಲ್ಲಿ ಮಾತ್ರ ರೈತರಿಂದ ಕಬ್ಬನ್ನು ಖರೀದಿಸಬೇಕು. ಅನಧಿಕೃತವಾಗಿ ಬೇರೆ ಸಕ್ಕರೆ ಕಾರ್ಖಾನೆ ವ್ಯಾಪ್ತಿಯ ರೈತರಿಂದ ಕಬ್ಬು ಖರೀದಿಸಿದರೆ ಅಂತಹ ಸಕ್ಕರೆ ಕಾರ್ಖಾನೆಯ ಪರವಾನಿಗೆ ರದ್ದುಪಡಿಸಲು ಜಿಲ್ಲಾಧಿಕಾರಿ ಡಾ. ಕುಮಾರ ಅವರು ಎಚ್ಚರಿಕೆ ನೀಡಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಶುಗರ್ ಫ್ಯಾಕ್ಟರಿ ಸಂಬಂಧ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಬಾರಿ ಬರದ ಹಿನ್ನೆಲೆಯಲ್ಲಿ ಕಬ್ಬಿನ ಇಳುವರಿ ಸಹ ಕಡಿಮೆ ಇರುತ್ತದೆ. ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುವಿಕೆಗೆ ಸ್ಪರ್ಧೆ ಉಂಟಾಗುವ ಸಾಧ್ಯತೆಯಿದ್ದು, ಸಕ್ಕರೆ ಕಾರ್ಖಾನೆಗಳು ಲಾಭ/ ನಷ್ಟ ಯಾವುದೇ ಉಂಟಾದರು ತಮ್ಮ ವ್ಯಾಪ್ತಿಗೆ ನಿಗಧಿಪಡಿಸಿದ ಕಬ್ಬನ್ನು ಮಾತ್ರ ಅರೆಯಬೇಕು ಎಂದರು.

ಏಕ ಕಾಲದಲ್ಲಿ ಕಬ್ಬು ಅರೆಯುವಿಕೆಗೆ



ಪ್ರಸ್ತಾವನೆ 2024 – 25 ನೇ ಸಾಲಿನ ಹಂಗಾಮಿನ ಕಬ್ಬು ಅರೆಯುವಿಕೆಗೆ ಸಂಬಂಧಿಸಿದಂತೆ ಯಾವುದಾದರು ಒಂದು ಸಕ್ಕರೆ ಕಾರ್ಖಾನೆ ಬೇರೆ ಸಕ್ಕರೆ ಕಾರ್ಖಾನೆಗಿಂತ ಮೊದಲು ಅರೆಯುವಿಕೆ ಪ್ರಾರಂಭಿಸಿದರೆ ಎಲ್ಲಾ ರೈತರು ತಮ್ಮ ಕಬ್ಬು ಖರೀದಿಸುವಂತೆ ಸಕ್ಕರೆ ಕಾರ್ಖಾನೆಗೆ ಮುಗಿ ಬೀಳುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿರುವ 5 ಸಕ್ಕರೆ ಕಾರ್ಖಾನೆಗಳು ಏಕಕಾಲದಲ್ಲಿ ಕಬ್ಬು ಅರೆಯಲು ಜುಲೈ 15 ರಿಂದ 30 ರವರೆಗೆ ಯಾವುದಾದರು ಒಂದು ದಿನಾಂಕವನ್ನು ನಿಗಧಿಪಡಿಸಿಕೊಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ಸಕ್ಕರೆ ಕಾರ್ಖಾನೆಗಳು ರೈತರಿಗೆ ಕಬ್ಬು ಬೆಳೆಯುವ ಪ್ರಕ್ರಿಯೆಯಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ನಡೆಸಬೇಕು. ರೈತರ ಕುಂದು ಕೊರತೆ ಸಭೆಯಲ್ಲಿ ರೈತರು ಕಬ್ಬು ಬಿತ್ತನೆಗೆ ಸಕ್ಕರೆ ಕಾರ್ಖಾನೆಗಳು ಬಿತ್ತನರ ಕಬ್ಬು ಒದಗಿಸುವಂತೆ ಚರ್ಚಿಸಿದ್ದಾರೆ. ಸಕ್ಕರೆ ಕಾರ್ಖಾನೆಗಳು ರೈತರಿಗೆ ನಡೆಸುವ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತಂತೆ ವರದಿ ನೀಡುವಂತೆ ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಹೆಚ್. ಎಲ್. ನಾಗರಾಜು, ಜಂಟಿ ಕೃಷಿ ನಿರ್ದೇಶಕ ಅಶೋಕ್, ಆಹಾರ ಇಲಾಖೆಯ ಜಂಟಿ ನಿರ್ದೇಶಕರು ಎಂ ಪಿ ಕೃಷ್ಣಕುಮಾರ್ ಸೇರಿದಂತೆ ವಿವಿಧ ಸಕ್ಕರೆ ಕಾರ್ಖಾನೆಯ ವ್ಯವಸ್ಥಾಪಕರುಗಳು ಉಪಸ್ಥಿತರಿದ್ದರು.



ವಿಶ್ವ ಪರಿಸರ ದಿನದ ನಿಮಿತ್ತ ಜಾಗೃತಿ ಕಾರ್ಯಕ್ರಮ

ಕಾಯಕಯೋಗಿ ಸುದ್ದಿ

ಮಂಡ್ಯ: ಜಿಲ್ಲಾಡಳಿತ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪರಿಸರ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ವತಿಯಿಂದ 'ನಮ್ಮ ಭೂಮಿ ನಮ್ಮ ಭವಿಷ್ಯ' ಎಂಬ ಘೋಷವಾಕ್ಯದಡಿ ವಿಶ್ವ ಪರಿಸರ ದಿನ-2024 ನಿಮಿತ್ತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಮೇ 31 ಬೆಳಿಗ್ಗೆ 10 ಗಂಟೆಗೆ ಶ್ರೀರಂಗಪಟ್ಟಣ ತಾಲ್ಲೂಕು ಪಶ್ಚಿಮವಾಹಿನಿಯ ಮಹಾತ್ಮಾಗಾಂಧಿ ಚಿತಾಭಸ್ಮ ಸ್ಮಾರಕದ ಬಳಿ ಕಾವೇರಿ ನದಿ ತಪ್ಪಲಿನ ಪ್ರದೇಶವನ್ನು ಶ್ರಮದಾನ ಹಮ್ಮಿಕೊಳ್ಳಲಾಗಿದೆ.

ಜೂ.1ರಂದು ಬೆಳಿಗ್ಗೆ 9.30 ಗಂಟೆಗೆ ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಛೇರಿಯ ಕಾವೇರಿ ಉದ್ಯಾನದಲ್ಲಿ ಮಾಧ್ಯಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಚಿತ್ರಕಲಾ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ.

ಜೂ.5ರಂದು ಮಂಡ್ಯ ಜಿಲ್ಲಾಧಿಕಾರಿ ಆವರಣದಿಂದ ಪರಿಸರ ಜಾಗೃತಿ ಕುರಿತು ಬೆಳಿಗ್ಗೆ 9.30 ಗಂಟೆಗೆ ಸೈಕಲ್ ಜಾಥಾ ಹಾಗೂ ಬೆಳಿಗ್ಗೆ 10.30 ಗಂಟೆಗೆ ಮಂಡ್ಯ ವಿಶ್ವವಿದ್ಯಾಲಯದ ಆವರಣದಲ್ಲಿ ಸಸ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ತರುವಾರ ಬೆಳಿಗ್ಗೆ 11.00 ಗಂಟೆಗೆ ಮಂಡ್ಯ ವಿಶ್ವವಿದ್ಯಾಲಯದ ಶಾರದಾ ಮಂದಿರದಲ್ಲಿ ಬಹುಮಾನ ವಿತರಣೆ ಮತ್ತು ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪರಿಸರ ಸಂಸ್ಥೆಯ ಅಧ್ಯಕ್ಷ ಮಂಗಲ ಎಂ.ಯೋಗೀಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಧಾನ ಪರಿಷತ್ ಚುನಾವಣೆ: ಎಂ.ಶ್ರೀನಿವಾಸ್ ಪ್ರಚಾರ

ಕಾಯಕಯೋಗಿ ಸುದ್ದಿ

ಮಂಡ್ಯ: ಜೂನ್.3 ರಂದು ನಡೆಯುವ ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಮರಿತಿಬ್ಬೇಗೌಡರ ಪರ ಮಾಜಿ ಶಾಸಕ ಎಂ.ಶ್ರೀನಿವಾಸ್ ನೇತೃತ್ವದಲ್ಲಿ ಕಾಂಗ್ರೆಸ್ ಮುಖಂಡರು ವಿವಿಧ ಕಾಲೇಜುಗಳಿಗೆ ಭೇಟಿ ಮಾಡಿ ಚುನಾವಣೆ ಪ್ರಚಾರ ನೆಡೆಸಿದರು.

ನಗರದ ಪೊಲೀಸ್ ಕಾಲೋನಿ ಸರ್ಕಾರಿ ಪದವಿ ಪೂರ್ವ ಕಾಲೇಜು, ಮಂಡ್ಯ ವಿಶ್ವವಿದ್ಯಾಲಯ,ಅಭಿನವ ಭಾರತಿ ವಿದ್ಯಾ ಕೇಂದ್ರ, ಸರ್ಕಾರಿ ಪದವಿ ಪೂರ್ವ ಕಾಲೇಜು ಮಾಜಿ ಪುರಸಭೆ,ಪದವಿ ಪೂರ್ವ ಕಾಲೇಜು ಕಲ್ಲುಕಟ್ಟಡ, ಸರ್ಕಾರಿ ಮಹಿಳಾ ಕಾಲೇಜು ಸೇರಿದಂತೆ ವಿವಿಧ ಕಾಲೇಜುಗಳಿಗೆ ಭೇಟಿ ನೀಡಿ ಪ್ರಚಾರ ನೆಡೆಸಿದರು.ನಂತರ ಮಾತನಾಡಿದ ಜಿ.ಪಂ.ಮಾಜಿ ಅಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್ ಮಾತನಾಡಿ ಐದನೇ ಬಾರಿಗೆ ದಕ್ಷಿಣ ಪದವೀಧರ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿರುವ ಮರಿತಿಬ್ಬೇಗೌಡರನ್ನು ಶಿಕ್ಷಕರು



ಮೊದಲನೇ ಪ್ರಾಶಸ್ತ್ಯ ಮತಗಳಿಂದ ಗೆಲ್ಲಿಸುವಂತೆ ಮನವಿ ಮಾಡಿದರು

ನಾಲ್ಕು ಬಾರಿ ದಕ್ಷಿಣ ಶಿಕ್ಷಕರ ಕ್ಷೇತ್ರವನ್ನು ಪ್ರತಿನಿಧಿಸಿ ಶಿಕ್ಷಕರ ಸಮಸ್ಯೆಗಳನ್ನು ಪರಿಹರಿಸಲು ಹೋರಾಟದ ಮೂಲಕ ದನಿಯಾಗಿ

ರುವ ಮರಿತಿಬ್ಬೇಗೌಡ ಅವರನ್ನು ಐದನೇ ಅವಧಿಗೆ ಆಯ್ಕೆ ಮಾಡುವುದರ ಮೂಲಕ ತಮ್ಮಗಳ ಸೇವೆ ಮಾಡಲು ಅವಕಾಶ ಮಾಡಿಕೊಡುವಂತೆ ಶಿಕ್ಷಕರಲ್ಲಿ ಮನವಿ ಮಾಡಿದರು.

ಶಿಕ್ಷಕರ ಕ್ಷೇತ್ರಕ್ಕೆ ಸಂಬಂಧ ಇಲ್ಲದ ವ್ಯಕ್ತಿಯನ್ನು ಜೆಡಿಎಸ್ ಬಿಜೆಪಿ ಯಿಂದ ಘೋಷಣೆ ಮಾಡಿದ್ದಾರೆ.

ಅವರು ಪದವಿಯನ್ನು ಓದಿಲ್ಲ ಅಥವಾ ಶಿಕ್ಷಕರೂ ಅಲ್ಲ,ಅವರಿಗೆ ಶಿಕ್ಷಕರ ಸಮಸ್ಯೆಗಳ ಬಗ್ಗೆ ಮಾಹಿತಿ ಇಲ್ಲ.ಆದ್ದರಿಂದ ಮರಿತಿಬ್ಬೇಗೌಡ ಅವರು ನಾಲ್ಕು ಬಾರಿ ಶಿಕ್ಷಕರ ಪ್ರತಿನಿಧಿಯಾಗಿ ಕೆಲಸ ಮಾಡಿ ಐದನೇ ಬಾರಿಗೆ ಸ್ಪರ್ಧಿಸಿರುವ ಅವರನ್ನು ಮತ್ತೊಂದು ಅವಧಿಗೆ ಗೆಲ್ಲಿಸುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ನಗರಸಭೆ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ಎಸ್.ಪಿ. ಗೌರೀಶ್, ನಾಗರತ್ನ, ಶಿವರಾಮ್, ಕಾಳೇಗೌಡ,ಭೈರವ ಸೇರಿದಂತೆ ಇತರರು ಹಾಜರಿದ್ದರು.

ಕೈ ಅಭ್ಯರ್ಥಿ ಪರ ಸಚಿವರ ಮತಯಾಚನೆ



ಕಾಯಕಯೋಗಿ ಸುದ್ದಿ

ಮಂಡ್ಯ: ಜೂನ್ ಮೂರರಂದು ನಡೆಯಲಿರುವ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಮರಿತಿಬ್ಬೇಗೌಡ ಅವರಿಗೆ ಶಿಕ್ಷಕ ಬಂಧುಗಳು ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಬೆಂಬಲಿಸಬೇಕೆಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ ಮನವಿ ಮಾಡಿದರು .

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ,ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ನಾಯಕತ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಮರಿತಿಬ್ಬೇಗೌಡರನ್ನು ಕಾಂಗ್ರೆಸ್ ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದಾರೆ ಎಂದು ತಿಳಿಸಿದರು. ಮೈಸೂರು, ಚಾಮರಾಜನಗರದಲ್ಲಿ ಸಚಿವ ಮಹದೇವಪ್ಪ ಅವರ ನೇತೃತ್ವದಲ್ಲಿ ಪ್ರಚಾರ ಕಾರ್ಯ ನಡೆಯುತ್ತಿದೆ .ಅಲ್ಲದೆ ಮಂಡ್ಯದಲ್ಲಿಯೂ ಎಲ್ಲರ ಸಹಕಾರದಿಂದ ಪ್ರಚಾರ ಕಾರ್ಯ ನಡೆಯುತ್ತಿದೆ ಎಂದರು . ಯಾವುದೇ ಒಂದು ಸಣ್ಣ ಭಿನ್ನಾಭಿಪ್ರಾಯ ಇಲ್ಲದಂತೆ ಪಕ್ಷ ಈ ಚುನಾವಣೆಯನ್ನು ನಡೆಸುತ್ತಿದೆ. ಈಗಾಗಲೇ ಹಳೆ ಪಿಂಚಣಿ ಯೋಜನೆ ಮತ್ತು ನೂತನ ಪಿಂಚಣಿ ಯೋಜನೆ ಸಮಸ್ಯೆಯನ್ನು ಬಗೆಹರಿಸುವುದಾಗಿ ಭರವಸೆ ನೀಡಲಾಗಿದ್ದು ,ಮುಂದಿನ ದಿನಗಳಲ್ಲಿ ಈ ಸಮಸ್ಯೆಯನ್ನು ನಿವಾರಿಸಲಾಗುವುದು ಎಂದರು. ಐದು ಗ್ಯಾರಂಟಿಗಳ ಜೊತೆಗೆ ಸರ್ಕಾರ ಹಲವಾರು ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾಡುತ್ತಿದೆ. ಮಂಡ್ಯದಲ್ಲಿ ಕೃಷಿ ವಿಶ್ವವಿದ್ಯಾಲಯ ಸ್ಥಾಪನೆ ಮಾಡಲು ಚಿಂತನೆ ನಡೆಸಲಾಗಿದೆ ಎಂದರು .

ಮರಿ ತಿಬ್ಬೆಗೌಡರು ಎಲ್ಲವನ್ನು ಮೀರಿ ಉತ್ತಮ ಕೆಲಸವನ್ನು ಮಾಡಿದ್ದಾರೆ .ಇವರು ಗೆದ್ದರೆ ವಿಧಾನ ಪರಿಷತ್ತಿನಲ್ಲಿ ಮಧು ಜಿ ಮಾದೇಗೌಡ ಅವರ ಜೊತೆ ಕೆಲಸ ಮಾಡಲು ಅನುಕೂಲ ಆಗುತ್ತದೆ. ಆದ್ದರಿಂದ ಶಿಕ್ಷಕ ಬಂಧುಗಳು ಮರಿ ತಿಬ್ಬೇ ಗೌಡರಿಗೆ ಮೊದಲ ಪ್ರಾಶಸ್ತ್ಯದ ಮತ ನೀಡವಂತೆ ಮನವಿ ಮಾಡಿದರು .

ಪತ್ರಿಕಾಗೋಷ್ಠಿಯಲ್ಲಿ ಶಾಸಕ ರವಿಕುಮಾರ್ ಗೌಡ ,ಮಾಜಿ ಶಾಸಕ ಎಂ ಶ್ರೀನಿವಾಸ್ ,ಮಂಡ್ಯ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿಡಿ ಗಂಗಾಧರ್ ,ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಅಂಜನ ಶ್ರೀಕಾಂತ್, ಹಿರಿಯ ಕಾಂಗ್ರೆಸ್ ಮುಖಂಡ ರುದ್ರಪ್ಪ ,ಶ್ರೀಧರ್ ಉಪಸ್ಥಿತರಿದ್ದರು.

'ಮಕ್ಕಳನ್ನು ತಂಬಾಕಿನಿಂದ ದೂರ ಉಳಿಸಿ'



ಕಾಯಕಯೋಗಿ ಸುದ್ದಿ

ಮದ್ದೂರು: ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಯನ್ನು ಮಾಡಲಾಯಿತು. ಈ ಕಾರ್ಯಕ್ರಮವನ್ನು ಕುರಿತು ಮಾತನಾಡಿದ ತಾಲೂಕಿನ ಯೋಜನಾಧಿ ಕಾರಿಗಳು ತಂಬಾಕಿನಿಂದ ಬರುವಂತಹ ಕಾಯಿಲೆಗಳು ಹಾಗೂ ಆರ್ಥಿಕ ಬಿಗ್ಗಟ್ಟಿನ ಬಗ್ಗೆ ಮಾಹಿತಿ ನೀಡಿದರು ಮಕ್ಕಳನ್ನು ತಂಬಾಕಿನಿಂದ ದೂರ ಉಳಿಸಿ ಅವರ ಆರೋಗ್ಯ ನಮ್ಮ ಕೈಯಲ್ಲಿದೆ ಎಂಬುದರ ಬಗ್ಗೆ ಮಾತನಾಡಿ ಸಂಸ್ಥೆಯ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾದಂತಹ ಸ್ವಾಮಿಯವರು ಮಾತನಾಡಿ ತಂಬಾಕು ಹೇಗೆ ಉತ್ಪತ್ತಿ ಆಗುತ್ತದೆ ಹಾಗೂ ಅದನ್ನು ಹೇಗೆ ಬಳಸುತ್ತಾರೆ ಎಂಬುದರ ಬಗ್ಗೆ ಮಾಹಿತಿ ನೀಡಿದರು ವರ್ಷದಲ್ಲಿ ತಂಬಾಕು 8,000 ಕೋಟಿ ಆದಾಯವನ್ನು ತಂದರೆ ಅದನ್ನು ತಿಂದಿರುವ ಮನುಷ್ಯರಿಂದ ಮೂವತ್ತು ಸಾವಿರ ಕೋಟಿ ನಷ್ಟ ಉಂಟಾಗುತ್ತದೆ ಹಾಗೂ ತಂಬಾಕಿನಲ್ಲಿ 370 ಬೇರೆ ಬೇರೆ ವಿಷಕಾರಿ ಅಂಶಗಳಿದ್ದು ಅದನ್ನು ಬಳಸುವುದು ಮನುಷ್ಯನ ದೇಹಕ್ಕೆ ವಿಪರೀತಾ ಹಾನಿಕರ ಎಂಬುದರ ಬಗ್ಗೆ ಮಾಹಿತಿ ನೀಡಿದರು ಹಾಗೂ ಕಾರ್ಯಕ್ರಮದ ಉಪಸ್ಥಿತಿಯಲ್ಲಿದ್ದ ಶ್ರೀ ಮುರಳಿಶ್ ಅವರು ಮಕ್ಕಳು ಹೇಗೆ ತಂಬಾಕಿನ ಚಟಕ್ಕೆ ಬಲಿಯಾಗುತ್ತಾರೆ ಅದರಿಂದ ಹೇಗೆ ಅವರನ್ನು ಹೊರ ತರಬೇಕು ಎಂಬುದರ ಬಗ್ಗೆ ಮಾತನಾಡಿದರು ಹಾಗೂ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಜಿಲ್ಲಾ ಜನಜಾಗೃತಿ ವೇದಿಕೆ ನಿಕಟ ಪೂರ್ವ ಅಧ್ಯಕ್ಷರು ಲಿಂಗೇಗೌಡ ರವರು ಸದಸ್ಯರನ್ನು ಕುರಿತು ಚರ್ಚಿಸಿ

ಅವರ ಮನೆಯಲ್ಲಿ ತಂಬಾಕಿನಿಂದ ಉಂಟಾಗಿದೆ ಸಮಸ್ಯೆಗಳ ಬಗ್ಗೆ ಕುರಿತು ಹಾಗೂ ಅದರಿಂದ ಆರೋಗ್ಯವನ್ನು ಕಾಪಾಡಿಕೊಳ್ಳುವುದರ ಬಗ್ಗೆ ಮಾತನಾಡಿದರು ಕೇಂದ್ರಬಿಂದುಗಳಾದ ಸಂಘದ ಸದಸ್ಯರು ವಿಚಾರವನ್ನು ಕುರಿತು ಮಾತನಾಡಿ ಈ ಮಾಹಿತಿಯು ನಮಗೆ ತುಂಬಾ ಅನುಕೂಲಕರವಾಗಿರುತ್ತದೆ ಧರ್ಮಸ್ಥಳ ಸಂಸ್ಥೆ ಇದೇ ರೀತಿ ಸಾವಿರಾರು ಕಾರ್ಯಕ್ರಮಗಳನ್ನು ಮಾಡುತ್ತಾ ನಮ್ಮ ಕಷ್ಟಗಳಿಗೆ ಸ್ಪಂದಿಸುತ್ತ ನಮ್ಮನ್ನು ಜ್ಞಾನದ ಅಭಿವೃದ್ಧಿಯತ್ತ ಕರೆದೊಯ್ಯುತ್ತಿರುವ ಪೂಜ್ಯರಿಗೆ ಮತ್ತು ಹೇಮಾವತಿ ಅಮ್ಮನವರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಈ ಕಾರ್ಯಕ್ರಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು, ಪ್ರಾಂಶುಪಾಲರು ಗೀತಾ ಹಾಗೂ ವಲಯದ ಮೇಲ್ವಿಚಾರಕರು ಚೈತ್ರ ಮತ್ತು ಸೇವಾ ಪ್ರತಿನಿಧಿಗಳು ಹಾಗೂ ಸಂಘದ ಸದಸ್ಯರು ಉಪ



ಮೈಸೂರು ತಾಲ್ಲೂಕಿನ ಮೆಲಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವತಿಯಿಂದ ಪ್ರಸಕ್ತ ಶೈಕ್ಷಣಿಕ ಸಾಲಿನ 'ವಿಶೇಷ ದಾಖಲಾತಿ ಆಂದೋಲನ' ನಡೆಯಿತು. ಮುಖ್ಯ ಶಿಕ್ಷಕಿ ಪಿ.ಎನ್. ವೀಣಾ, ಜಿಲ್ಲಾ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಟಿ ಸತೀಶ್ ಜವರೇಗೌಡ, ಶಾಲೆಯ ಶಿಕ್ಷಕರು ಮತ್ತು ಮಕ್ಕಳು ಉಪಸ್ಥಿತರಿದ್ದರು.



ಮೈಸೂರು: ಶಿಕ್ಷಕರ ಕ್ಷೇತ್ರದ ಚುನಾವಣೆಯ ನಿಮಿತ್ತ ಇಂದು ಮೈಸೂರಿನ ಮಹಾರಾಜ ಮತ್ತು ಯುವರಾಜ ಕಾಲೇಜಿನಲ್ಲಿ ಮತಯಾಚನೆ ಮಾಡಲಾಯಿತು, ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಮರಿತಿಬ್ಬೇಗೌಡ ರವರಿಗೆ ಮೊದಲನೆಯ ಪ್ರಾಶಸ್ತ್ಯದ ಮತವನ್ನು ನೀಡಬೇಕೆಂದು ಮನವಿ ಮಾಡಲಾಯಿತು. ಈ ಸಂದರ್ಭದಲ್ಲಿ ಮೈಸೂರು- ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾದ ಎಂ ಲಕ್ಷ್ಮಣ್ ರವರು ಹಾಗೂ ಮೈಸೂರು ನಗರ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಆರ್ ಮೂರ್ತಿರವರು. ನಗರ ಪ್ರಧಾನ ಕಾರ್ಯದರ್ಶಿಗಳಾದ ಎಂ ಶಿವಣ್ಣ. ಭಾಸ್ಕರ್ ಎಲ್ ಗೌಡ. ಗಿರೀಶ್.ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷರಾದ ಬಿ ಎಂ ರಾಮು. ಮಾಜಿ ಮೇಯರ್ ಗಳಾದ ಮೂದಮಣಿ. ಬಿಕೆ ಪ್ರಕಾಶ್. ಕೆಪಿಸಿಸಿ ಮಹಿಳಾ ಉಪಾಧ್ಯಕ್ಷರಾದ ಪುಷ್ಪವಲ್ಲಿ ಇನ್ನು ಮುಂತಾದ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.



ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ಸಿನಿಮಾ ನಿರ್ದೇಶಕ ನೀನಾಸಂ ಮಂಜು ಅವರು ಮೈಸೂರಿನ ಬೋಗಾದಿಯ ಶಾರದಾನಗರ ರೈಲ್ವೆ ಬಡವಾಣೆಯ ಶರಣು ವಿಶ್ವವಚನ ಫೌಂಡೇಷನ್ ಕಛೇರಿಗೆ ಭೇಟಿ ನೀಡಿದ ನಿಮಿತ್ತ ಸನ್ಮಾನಿಸಲಾಯಿತು. ಶರಣು ವಿಶ್ವವಚನ ಫೌಂಡೇಷನ್ ಸಂಸ್ಥಾಪಕರಾದ ವಚನ ಕುಮಾರಸ್ವಾಮಿ ಮತ್ತು ರೂಪಾ ಕುಮಾರಸ್ವಾಮಿ ಮತ್ತು ಕರ್ನಾಟಕ ರಾಜ್ಯ ಶಿಕ್ಷಕರ ಪ್ರತಿಭಾ ಪರಿಷತ್ತಿನ ಅಧ್ಯಕ್ಷ ಪಿ. ಮಹೇಶ್ ಇದ್ದರು.

ಅಗತ್ಯ ಸೇವೆ ನೀಡಬೇಕಿದ್ದ ಅಧಿಕಾರಿಗಳ ಅಸಡ್ಡೆ ಉತ್ತರ | **ಕಾಡಾಂಚಿನ ಗ್ರಾಮದ ಜನತೆ ಅಳಲು**

ಬಸ್ ಸಿಗದೇ ಪ್ರಯಾಣಿಕರ ಪರದಾಟ

ಕಾಯಕಯೋಗಿ ಸುದ್ದಿ

ಹೆಚ್.ಡಿ.ಕೋಟೆ:ತಾಲೂಕು ಕೇಂದ್ರಸ್ಥಾನದಿಂದ ಸರಗೂರು ಪಟ್ಟಣಕ್ಕೆ ಸಂಜೆ 5ಗಂಟೆಯಿಂದ ರಾತ್ರಿ 8 ಗಂಟೆಯ ತನಕ ಬಸ್ ಇಲ್ಲದೇ ಪ್ರಯಾಣಿಕರು ಪರದಾಡಿದ ಪ್ರಸಂಗ ನಡೆಯಿತು.

ಅವಳಿ ತಾಲೂಕಿನ ಜನತೆ ಆಸ್ಪತ್ರೆ, ಶಿಕ್ಷಣ, ವ್ಯಾಪಾರ, ಉದ್ಯೋಗ ಸೇರಿದಂತೆ ವಿವಿಧ ಕಾರಣಗಳಿಂದ ಜನತೆ ದೂರದ ಊರುಗಳಿಂದ ಹೆಚ್.ಡಿ.ಕೋಟೆಗೆ ಆಗಮಿಸಿ ತಮ್ಮ ಕಾರ್ಯ ಮುಗಿಸಿ ಹಿಂದುರು ಗಲಿದ್ದಾರೆ. ಬಡ ಜನತೆ ಬಸ್ಸನ್ನೇ ಅವಲಂಭಿಸಿರುವುದರಿಂದ ಸರಿಯಾದ ಸಮಯಕ್ಕೆ ಬಸ್ ಸಿಗದೇ ಮಕ್ಕಳು, ವಯೋ ವೃದ್ದರು ನಿಲ್ದಾಣದಲ್ಲಿ ಕಾದು ಕಾದು ಸುಸ್ತಾಗುತ್ತಿದ್ದಾರೆ.

ತಾಲೂಕಿನಲ್ಲಿ ಡಿಪೋ ನಿರ್ಮಾಣ ವಾಗುವ ಮೊದಲು ಸರಗೂರಿನಿಂದ ಹೆಚ್.ಡಿ.ಕೋಟೆಗೆ ಪ್ರತೀ 15 ನಿಮಿಷಗಳಿಗೊಮ್ಮೆ ಬಸ್ ವ್ಯವಸ್ಥೆ ಕಲ್ಪಿಸಲಾಗಿತ್ತು. ಕಳೆದ 15 ವರ್ಷಗಳಿಂದ ಕೋಟೆ ಪಟ್ಟಣದಲ್ಲಿಯೇ ಡಿಪೋ ನಿರ್ಮಾಣಗೊಂಡರೂ ಸಮೀಪದ ಸರಗೂರಿಗೆ ಬಸ್ ಸಂಪರ್ಕ ಕಲ್ಪಿಸುತ್ತಿಲ್ಲ.

ಜನತೆ ಹೆಚ್.ಡಿ.ಕೋಟೆಯಿಂದ ಅರ್ಧ ಘಂಟೆಯ ಪ್ರಯಾಣ ದೊಂದಿಗೆ ಸರಗೂರು ತಲುಪಿ, ಸರಗೂರಿನಿಂದ ನಡಾಡಿ, ಕಟ್ಟೆಹುಣಸೂರು, ಕಲ್ಲಂಬಾಳು, ಚಾಮಲಾಪುರ, ಮುಳ್ಳೂರು,





ಹಾದನೂರು, ಬಡಗಲಪುರ, ಕೊಡಗೀ , ಕೂರ್ಣಿಗಾಲ, ಬಾಡಿಗೆ, ಬಂಕವಾಡಿ, ನಡಾಡಿ ಸೇರಿದಂತೆ ಅನೇಕ ಕಾಡಂಚಿನ ಗ್ರಾಮಗಳಿರು ವುದರಿಂದ ಕೋಟೆಯಲ್ಲಿಯೇ ರಾತ್ರಿ 8 ಗಂಟೆಯಾದರೇ ನಾವು ಮನೆ ಸೇರುವುದು ಸರಿ ಸುಮಾರು 10 ಗಂಟೆಯಾದರೂ ಆಗಬಹುದು ಇದು ಎಂದು ಪ್ರಯಾಣಿಕರಾದ ಮುಳ್ಳೂರು ಗ್ರಾಮದ ಚಿನ್ನಮ್ಮ ಅವಲತ್ತುಕೊಂಡರು.

ಕಾದು ಕಾದು ಸುಸ್ತಾದ ಪ್ರಯಾಣಿ ಕರು ಸಂಚಾರಿ ನಿಯಂತ್ರ ಕರನ್ನು ಕೇಳಿದರೆ ಅಸಡ್ಡೆಯಾಗಿ ಉತ್ತರಿ ಸಿದ್ದಾರೆ. ಈ ಬಗ್ಗೆ ಘಟಕ ವ್ಯವಸ್ಥಾಪಕರನ್ನು ದೂರವಾಣಿ ಮೂಲಕ ಸಂಪರ್ಕಿಸಿದರೆ ಕರೆ ಉತ್ತರಿಸುವುದಿಲ್ಲ. ಈ ಬಗ್ಗೆ ಕೆಎಸ್ ಆರ್ ಟಿ ಸಿ ಯ ಜಿಲ್ಲಾಮಟ್ಟದ ಅಧಿಕಾರಿಗಳು ಕರೆಗೆ ಉತ್ತರಿಸುವ ಗೋಜಿಗೆ ಹೋಗಲಿಲ್ಲ. ಸಮಸ್ಯೆಯ ಸ್ಪಂದನೆಗೆ ಬೆಂಗಳೂರಿನ ಕೇಂದ್ರ ಕಚೇರಿಗೆ ಸಂಜೆ 7:20ರಲ್ಲಿ ಕರೆ ಮಾಡಿ ದೂರು ನೀಡಿದರೆ, 5:30 ರಿಂದ ನಡೆದುಕೊಂಡು ಹೋಗಿದ್ದರೂ ನೀವು ಊರು ಸೇರಬಹುದಿತ್ತು ಎಂದು ಉತ್ತರ ನೀಡುತ್ತಾರೆ ಮಹಿಳಾ ಅಧಿಕಾರಿ. ಇದರಿಂದ ಕುಪಿತಗೊಂಡ ಮಹಿಳಾ ಪ್ರಯಾಣಿಕರೇ ನೀವು ಮಹಿಳೆಯಾಗಿ ಈ ರೀತಿ ಮಾತನಾಡವುದು ತಪ್ಪು ಎಂದು ಹೇಳಿದ ತಕ್ಷಣ ಮರು ಮಾತನಾಡದೇ ಏಕಾಏಕಿ ದೂರ ವಾಣಿ ಸಂಪರ್ಕ ಕಡಿತಗೊಳಿಸಿದರು.

ಶ್ರೀಸಾಮಾನ್ಯರಿಗೆ ಸ್ಪಂಧಿಸಬೇಕಿದ್ದ ಅಧಿಕಾರಿಗಳೆಲ್ಲರೂ ಈ ರೀತಿಯ ಅಸಡ್ಡೆ ಉತ್ತರ ನೀಡಿದರೆ ಜನರ ತೆರಿಗೆ ದುಡ್ಡಿನಲ್ಲಿ ಸಂಬಳ ಪಡೆಯುವ ಅಧಿಕಾರಿಗಳಿಗೆ ಎಂದಾದರೂ ಬುದ್ಧಿ ಬರುತ್ತದೋ ಎಂದು ಇಡೀ ಶಾಪ ಹಾಕಿದರು.

ಕರ್ನಾಟಕ ವಿಧಾನ ಪರಿಷತ್ ಚುನಾವಣೆ: ಜೂ. 03 ರಂದು ಸಾಂದರ್ಭಿಕ ರಜೆ

ಮೈಸೂರು: ಕರ್ನಾಟಕ ವಿಧಾನ ಪರಿಷತ್ತಿಗೆ ದಕ್ಷಿಣ ಶಿಕ್ಷಕರ ಕ್ಷೇತ್ರ, ನೈರುತ್ಯ ಪದವೀಧರರ ಕ್ಷೇತ್ರ ಹಾಗೂ ನೈರುತ್ಯ ಶಿಕ್ಷಕರ ಕ್ಷೇತ್ರಗಳಿಂದ ನಡೆಯುವ ವಾರ್ಷಿಕ ಚುನಾವಣೆಯು ಜೂ.3 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದ್ದು, ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿರುವ ಮತದಾರರು ಕಡ್ಡಾಯವಾಗಿ ಮತದಾನ ಮಾಡುವಂತೆ ಕೋರಿದೆ.

ದಕ್ಷಿಣ ಶಿಕ್ಷಕರ ಕ್ಷೇತ್ರಗಳಾದ ಮೈಸೂರು, ಚಾಮರಾಜನಗರ, ಮಂಡ್ಯ ಹಾಗೂ ಹಾಸನ ಕ್ಷೇತ್ರಗಳ ಸರ್ಕಾರಿ ಹಾಗೂ ಖಾಸಗಿ ಶಾಲಾ ಕಾಲೇಜುಗಳು, ಅನುದಾನಿತ ಹಾಗೂ ಅನುದಾನ ರಹಿತ ವಿದ್ಯಾ ಸಂಸ್ಥೆಗಳು, ಎಲ್ಲಾ ಶೈಕ್ಷಣಿಕ ಸಂಸ್ಥೆಗಳು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಕಛೇರಿಗಳು, ರಾಷ್ಟ್ರೀಕೃತ ಹಾಗೂ ಇತರ ಬ್ಯಾಂಕುಗಳು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಖಾನೆಗಳು, ಉಳಿದ ಕೈಗಾರಿಕೆ ಸಂಸ್ಥೆಗಳು ಹಾಗೂ ಸಹಕಾರ ರಂಗದ ಸಂಘ ಸಂಸ್ಥೆಗಳಲ್ಲಿ ಎಲ್ಲಾ ವ್ಯವಹಾರಿಕ ಸಂಸ್ಥೆಗಳಲ್ಲಿ ಔದ್ಯಮಿಕ ಸಂಸ್ಥೆಗಳಲ್ಲಿ ಮತ್ತು ಇತರ ಎಸ್ಟಾಬ್ಲಿಷ್‌ಮೆಂಟ್‌ಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುವ ಪದವೀಧರರು ಹಾಗೂ ಶಿಕ್ಷಕರು ಮತದಾನ ಮಾಡಲು ಅನುಕೂಲವಾಗುವಂತೆ ಮತದಾರರಿಗೆ ಜೂ. 03 ರಂದು ವಿಶೇಷ ಸಾಂದರ್ಭಿಕ ರಜೆಯನ್ನು ನೀಡಲಾಗಿದೆ.

ಜೂ.3 ರಂದು ಮತದಾರರನ್ನು ಗುರುತಿಸಲು ಮತದಾರರ ಭಾವಚಿತ್ರವುಳ್ಳ ಗುರುತಿನ ಚೀಟಿ (EPIC)ನ್ನು ಮುಖ್ಯ ದಾಖಲಾತಿಯಾಗಿ ಹಾಜರು ಪಡಿಸಬೇಕು. ಮತದಾರರ ಪಟ್ಟಿಯಲ್ಲಿ ಹೆಸರಿದ್ದವರು ಇಕಾಲ ಹೊಂದಿಲ್ಲದಿದ್ದಲ್ಲಿ ಅಂತಹವರು ಭಾರತ ಚುನಾವಣಾ ಆಯೋಗವು ನಿರ್ಧರಿಸಿರುವ ಆಧಾರ್ ಕಾರ್ಡ್, ಚಾಲನಾ ಪರವಾನಿಗೆ, ಪ್ಯಾನ್ ಕಾರ್ಡ್, ಭಾರತೀಯ ಪಾಸ್ಪೋರ್ಟ್, ಕೇಂದ್ರ ರಾಜ್ಯ ಸರ್ಕಾರ, ಸಾರ್ವಜನಿಕ ವಲಯದ ಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳು ಅಥವಾ ಇತರ ಪ್ರಧಾನ ಕೈಗಾರಿಕಾ ಮನೆಗಳು ತನ್ನ ಉದ್ಯೋಗಿಗಳಿಗೆ ನೀಡಿದ ಸೇವಾ ಗುರುತಿನ ಚೀಟಿಗಳು, MP, ಶಾಸಕರು, MLC ಗಳಿಗೆ ಅಧಿಕೃತ ಗುರುತಿನ ಚೀಟಿ, ಚುನಾಯಿತರು ಶಿಕ್ಷಣ ಸಂಸ್ಥೆಗಳು ನೀಡಿದ ಹಿರಿಯ ಗುರುತಿನ ಚೀಟಿಗಳು, ವಿಶ್ವವಿದ್ಯಾಲಯದಿಂದ ನೀಡಲಾಗಿರುವ ಪದವಿ/ಡಿಪ್ಲೋಮಾ ಒರಿಜಿನಲ್ ಪ್ರಮಾಣಪತ್ರ, ಸಕ್ಷಮ ಪ್ರಾಧಿಕಾರವು ನೀಡಿದ ದೈಹಿಕ ಅಂಗವಿಕಲತೆಯ ಪ್ರಮಾಣಪತ್ರ, ವಿಶಿಷ್ಟ ಅಂಗವೈಕಲ್ಯ ಇದ್ದವರಾದಲ್ಲಿ ಗುಖಅ�ಖ ಕಾರ್ಡ್ ಅಥವಾ ಇತರೆ ಪೂರಕ ದಾಖಲಾತಿಗಳ ಪೈಕಿ ಬಂದನ್ನು ಹಾಜರುಪಡಿಸಿ ಮತದಾನ ಮಾಡಲು ಅವಕಾಶವಿರುತ್ತದೆ ಎಂದು ಕರ್ನಾಟಕ ನೈಋತ್ಯ ಪದವೀಧರರ ಕ್ಷೇತ್ರ, ನೈಋತ್ಯ ಶಿಕ್ಷಕರ ಕ್ಷೇತ್ರ ಮತ್ತು ದಕ್ಷಿಣ ಶಿಕ್ಷಕರ ಕ್ಷೇತ್ರ ಹಾಗೂ ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು: ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯಿಂದ 2024 ನೇ ಸಾಲಿನ ಬೀರಿಹುಂಡಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಆಸಕ್ತ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಇಲಾಖಾ ವೆಬ್ ಸೈಟ್ http://www.cite.karnataka.gov.in ರಲ್ಲಿ ನೇರವಾಗಿ ಅಥವಾ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಅಥವಾ ಸಾರ್ವಜನಿಕ ಸೈಬರ್ ಕೆಫೆಗಳ ಮೂಲಕ ಜೂ.3 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಬೀರಿಹುಂಡಿಯನ್ನು ನೇರವಾಗಿ ಅಥವಾ ದೂ.ಸಂ.9480190608 ಮತ್ತು 9535368929 ಅನ್ನು ಸಂಪರ್ಕಿಸಬಹುದು ಎಂದು ಬೀರಿಹುಂಡಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿಸಿ ಮತ ಎಣಿಕೆ ಕೇಂದ್ರಕ್ಕೆ ಭೇಟಿ

ಮಂಡ್ಯ: ಜಿಲ್ಲಾಧಿಕಾರಿ ಡಾ: ಕುಮಾರ ಅವರು ಜೂನ್ 4 ರಂದು ಮಂಡ್ಯ ವಿಶ್ವವಿದ್ಯಾಲಯದಲ್ಲಿ ನಡೆಯಲಿರುವ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಎಣಿಕೆ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಹೆಚ್ ಎಲ್ ನಾಗರಾಜು, ಚುನಾವಣಾ ತಹಶೀಲ್ದಾರ್ ವೆಂಕಟಾಚಲಪತಿ, ದೀಪಕ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಜೂನ್ 4ರಂದು ಲೋಕಸಭಾ ಚುನಾವಣೆಯ ಮತಗಳ ಎಣಿಕೆ

ಮೈಸೂರು ಜಿಲ್ಲಾಧಿಕಾರಿ ಡಾ. ಕೆ.ವಿ ರಾಜೇಂದ್ರ ಸುದ್ದಿಗೋಷ್ಠಿ

ಕಾಯಕಯೋಗಿ ಸುದ್ದಿ

ಮೈಸೂರಿನ: ಜಿಪಂ ಸಭಾಂಗಣದಲ್ಲಿ ಸುದ್ದಿಗೋಷ್ಠಿ ಮೈಸೂರಿನ ಪಡುವಾರಹಳ್ಳಿಯ ಮಹಾರಾಣಿ ಕಾಲೇಜಿನಲ್ಲಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಮತಗಳ ಎಣಿಕೆಗೆ ಸಿದ್ದತೆ.

ಜೂನ್ 4ರಂದು ಬೆಳಿಗ್ಗೆ 7:30ಕ್ಕೆ ಸ್ಟ್ರಾಂಗ್ ರೂಂ ತೆರವು. 8 ಗಂಟೆಗೆ ಅಂಚೆ ಮತಗಳ ಎಣಿಕೆಗೆ ಚಾಲನೆ. 8:30ಕ್ಕೆ ವಿದ್ಯುನ್ಮಾನ ಮತಯಂತ್ರಗಳ ಎಣಿಕೆ ಆರಂಭ. ಪ್ರತಿ ವಿಧಾನಸಭೆ ಕ್ಷೇತ್ರದ ಮತಗಳ ಎಣಿಕೆಗೆ 14 ಟೇಬಲ್ ಗಳು ವ್ಯವಸ್ಥೆ. ಮಡಿಕೇರಿ, ವಿರಾಜಪೇಟೆ, ಹುಣಸೂರು ಕ್ಷೇತ್ರಗಳ ಮತ ಎಣಿಕೆ 20 ಸುತ್ತುಗಳಲ್ಲಿ ಮುಕ್ತಾಯ.


ಪಿರಿಯಾಪಟ್ಟಣ 17 ಸುತ್ತು, ಚಾಮುಂಡೇಶ್ವರಿ 25 ಸುತ್ತು, ಕೃಷ್ಣರಾಜ 19 ಸುತ್ತು, ಚಾಮರಾಜ 18 ಸುತ್ತು ಹಾಗೂ ನರಸಿಂಹರಾಜ ಕ್ಷೇತ್ರದ ಮತಗಳ ಎಣಿಕೆ 21



ಸುತ್ತುಗಳಲ್ಲಿ ಮುಕ್ತಾಯ. ಎಲ್ಲಾ ಅಭ್ಯರ್ಥಿಗಳು ಮತ ಎಣಿಕೆ ಏಜೆಂಟರ ನೇಮಕಾತಿಗೆ ಅವಕಾಶ. ಮತಗಳ ಎಣಿಕೆ ಕುರಿತು ಮೈಸೂರು ಜಿಲ್ಲಾಧಿಕಾರಿ ಡಾ ಕೆ ವಿ ರಾಜೇಂದ್ರ ಮಾಹಿತಿ.

ಲೋಕಸಭಾ ಚುನಾವಣೆ ಮತ ಎಣಿಕೆಗೆ ಅಗತ್ಯ ಬಂದೋಬಸ್ತ್ ಮಾಡಲಾಗುತ್ತದೆ. ಸ್ಟ್ರಾಂಗ್ ರೂಂ ತೆರೆದ ನಂತರ ಪ್ರತಿಯೊಂದು ವಿಧಾನಸಭಾ ಕ್ಷೇತ್ರದ ಮತಗಳ ಎಣಿಕೆಗೆ ಸೂಕ್ತ ಭದ್ರತೆ ಕೈಗೊಳ್ಳಲಾಗುವುದು. ಪಾಸ್ ಪಡೆದಿರುವವರಿಗೆ ಮಾತ್ರ ಮತ ಎಣಿಕೆ ಕೇಂದ್ರದ ಪ್ರವೇಶಕ್ಕೆ ಅವಕಾಶ. ಮತ ಎಣಿಕೆ ಕೇಂದ್ರದ ಆಸುಪಾಸಿನ ರಸ್ತೆಗಳಲ್ಲಿ ವಾಹನಗಳ ಸಂಚಾರಕ್ಕೆ ನಿರ್ಬಂಧ. ಪರ್ಯಾಯ ಮಾರ್ಗಗಳಲ್ಲಿ ವಾಹನಗಳ ಸಂಚಾರಕ್ಕೆ ಅವಕಾಶ. ಕೆ ಎಸ್ ಆರ್ ಪಿ, ಸಿ ಎ ಆರ್, ಚಾಮುಂಡಿ ಪಡೆಯ ತುಕಡಿಗಳು ಭದ್ರತೆ-ಗೆ ನಿಯೋಜನೆ. ಮೈಸೂರು ನಗರ ಪೊಲೀಸ್ ಆಯುಕ್ತ ರಮೇಶ್ ಬಾನೋತ್ ಮಾಹಿತಿ.

ಅಪರಿಚಿತ ವ್ಯಕ್ತಿಯ ಶವ ಪತ್ತೆ



ಮೈಸೂರು: ಇಂದು ಮೈಸೂರು-ಎಂ.ಬಿ.ಬಿ.ಸಿ ರೈಲು ನಿಲ್ದಾಣಗಳ ನಡುವೆ ರೈಲುಗಾಡಿಗೆ ಸಿಕ್ಕಿ ಸುಮಾರು 55 ವರ್ಷದ ವ್ಯಕ್ತಿಯು ಮೃತಪಟ್ಟಿದ್ದಾರೆ. ಮೃತದೇಹವು ಮೈಸೂರಿನ ಕೆ.ಆರ್ ಆಸ್ಪತ್ರೆಯ ಶವಗಾರದಲ್ಲಿದ್ದು, ಮೈಸೂರು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ.

ಚಹರೆ: ಮೃತ ವ್ಯಕ್ತಿಯು ಸುಮಾರು 55 ವರ್ಷದವರಾಗಿದ್ದು, 5.6 ಅಡಿ ಎತ್ತರ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ಕೋಲು ಮುಖ, ತಲೆಯಲ್ಲಿ ಸುಮಾರು 1 ಇಂಚು ಉದ್ದದ ಬಿಳಿ ಬಣ್ಣದ ಕೂದಲು, ಕುರುಚಲು ಗಡ್ಡ ಮೀಸೆ ಬಿಟ್ಟಿರುತ್ತಾರೆ. ಎಡ ಕಣ್ಣು ಮುಚ್ಚಿದ್ದು, ಬಲಕಣ್ಣು ತೆರೆದಿರುತ್ತದೆ. ಶರ್ಟ್ ಕಾಲರ್‌ನಲ್ಲಿ MY Tailoring House Ashok Road MYS-1 Ph.No. 6955898 ಎಂದು ಬರೆದಿರುತ್ತದೆ.

ಮೃತನು ಲೈಟ್ ಕೆಂಪು ಬಣ್ಣದ ತುಂಬು ತೋಳಿನ ಶರ್ಟ್, ಕಪ್ಪು ಬಣ್ಣದ ಚಡ್ಡಿ, ಸೊಂಟದಲ್ಲಿ ಬಿಳಿ ಬಣ್ಣದ ಉಡುದಾರ, ಬಲಗೈನಲ್ಲಿ ಲೈಟ್ ಕಲರ್ ಬ್ಲೂ ಮತ್ತು ಡಾರ್ಕ್ ಬ್ಲೂ ಹೇರ್ ಬ್ಯಾಂಡ್ ಹಾಕಿರುತ್ತಾರೆ.

ಮೃತನ ವಾರಸುದಾರರ ಬಗ್ಗೆ ಮಾಹಿತಿ ದೊರೆತಲ್ಲಿ ಮೈಸೂರು ರೈಲ್ವೆ ಪೊಲೀಸ್ ಠಾಣೆಯ ದೂ.ಸಂ: 0821-2516579 ಅಥವಾ 9480802122 ಅನ್ನು ಸಂಪರ್ಕಿಸಬಹುದು ಎಂದು ಮೈಸೂರು ರೈಲ್ವೆ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಗ್ರಾಮೀಣ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರು ಪೂರೈಸಿ

ತಾ.ಪಂ. ಇಓ ಮಮತಾ ಎಲ್. ಅಧಿಕಾರಿಗಳಿಗೆ ಖಡಕ್ ಸೂಚನೆ

ಕಾಯಕಯೋಗಿ ಸುದ್ದಿ

ಮಂಡ್ಯ: ಜನವಸತಿ ಪ್ರದೇಶಗಳಲ್ಲಿ ಕಲುಷಿತ ನೀರು ಸೇವನೆಯಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಉಂಟಾಗಬಹುದಾದ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಮಳವಳ್ಳಿ ತಾಲ್ಲೂಕಿನ 39 ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಇರುವ ಎಲ್ಲಾ ಓವರ್ ಹೆಡ್ ಟ್ಯಾಂಕ್, ತೊಂಬೆಗಳು,ಹಾಗೂ ಕುಡಿಯುವ ನೀರಿನ ಎಲ್ಲಾ ಮೂಲಗಳನ್ನು ಸ್ವಚ್ಛಗೊಳಿಸಲು ನಿಯಮಾನುಸಾರ ಅಗತ್ಯ ಕ್ರಮವಹಿಸುವಂತೆ ಎಲ್ಲಾ ಗ್ರಾಮ ಪಂಚಾಯಿತಿಯ ಪಿ.ಡಿ.ಓ.ರವರಿಗೆ ನಿರ್ದೇಶನ ನೀಡಲಾಗಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕುಡಿಯುವ ನೀರು ಸರಬರಾಜು ಕೊಳವೆ ಬಾವಿಗಳ ಸುತ್ತ ಸ್ವಚ್ಛತೆ ಕಾಪಾಡಲು ಮತ್ತು ಅದರ ಸುತ್ತ ಯಾವುದೇ ಕಲುಷಿತ ನೀರು ನಿಲ್ಲದಂತೆ, ನೀರು ಸರಬರಾಜು ಮಾಡುವ ಯಾವುದೇ ಪೈಪ್ ಲೈನ್ ನಲ್ಲಿ ಲೀಕೇಜ್ ಇಲ್ಲದಿರುವ ಬಗ್ಗೆ ಖಚಿತಪಡಿಸಿಕೊಳ್ಳಲು, ಗ್ರಾಮದ ಎಲ್ಲಾ ಚರಂಡಿಗಳನ್ನು ಸ್ವಚ್ಛಗೊಳಿಸಿ ನೀರು ನಿಲ್ಲದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುತ್ತಿರುವುದಾಗಿ ಕಾರ್ಯನಿರ್ವಾಹಕ ಅಧಿಕಾರಿಳಾದ ಮಮತಾ. ಎಲ್ ರವರು ತಿಳಿಸಿದರು.

ಗ್ರಾಮೀಣ ಜನವಸತಿ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡುವುದು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯವನ್ನು ಕಾಪಾಡುವುದು ಆಯಾ



ಗ್ರಾಮ ಪಂಚಾಯಿತ

ಕಾಯಕಯೋಗಿ

31-05-2024
ಶುಕ್ರವಾರ

ಆರ್‌ಟಿಸಿಗೆ ಆಧಾರ್ ಜೋಡಣೆಯಿಂದ ಲಾಭ!



ಹನೂರು: ರೈತರು ಹೊಂದಿರುವ ಜಮೀನುಗಳ ಆರ್‌ಟಿಸಿ ಗೆ ಆಧಾರ್ ನಂಬರ್‌ನೊಂದಿಗೆ ಜೋಡಿಸುವ ಕಾರ್ಯ ಪ್ರಕ್ರಿಯೆಯಲ್ಲಿದ್ದು ಈ ಯೋಜನೆಯನ್ನು ಪ್ರತಿಯೊಬ್ಬರು ಸದ್ಬಳಕೆ ಮಾಡಿಕೊಳ್ಳುವಂತೆ ತಹಸಿಲ್ದಾರ್ ಮೈ.ಕೆ ಗುರುಪ್ರಸಾದ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹನೂರು ತಾಲೂಕಿನಲ್ಲಿ 88167 ಭೂ ಮಾಲೀಕರ ಆರ್‌ಟಿಸಿಯನ್ನು ಈಕೆವೈಸಿ ಮೂಲಕ ಆಧಾರ್ ನಂಬರ್ ನೊಂದಿಗೆ ಜೋಡಿಸುವ ಕಾರ್ಯವನ್ನು ಸಂಬಂಧಪಟ್ಟ ಗ್ರಾಮ ಆಡಳಿತ ಅಧಿಕಾರಿಗಳು ಕಳೆದ ಒಂದು ವಾರದಿಂದ ಗ್ರಾಮಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಕಾರ್ಯದಲ್ಲಿ ಭೂ ಮಾಲೀಕರು ತಮ್ಮ ಆರ್ ಟಿ ಸಿ, ಆಧಾರ್ ಕಾರ್ಡ್ ನೊಂದಿಗೆ, ಆಧಾರ್ ಸಂಖ್ಯೆಗೆ ಜೋಡಣೆ ಆಗಿರುವ ಮೊಬೈಲ್ ನಂಬರ್ ನೊಂದಿಗೆ ಗ್ರಾಮ ಆಡಳಿತ ಅಧಿಕಾರಿಗಳನ್ನು ಸಂಪರ್ಕಿಸಿ ಈ ಪ್ರಯೋಜನವನ್ನು ಪಡೆದುಕೊಳ್ಳಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

8 ವರ್ಷದ ಬಾಲಕಿಗೆ 2 ಮಕ್ಕಳ ತಂದೆಯಿಂದ ಲೈಂಗಿಕ ದೌರ್ಜನ್ಯ: ಜನರಿಂದ ಗೂಸಾ



ಚಾಮರಾಜನಗರ:ಅಪ್ರಾಪ್ತೆಗೆಮಧ್ಯವಯಸ್ಕವ್ಯಕ್ತಿಯೋರ್ವ ಲೈಂಗಿಕ ದೌರ್ಜನ್ಯ ಎಸಗಿರುವ ಘಟನೆ ಕೊಳ್ಳೇಗಾಲ ತಾಲೂಕಿನ ದೊಡ್ಡಿಂದುವಾಡಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ವೀರಭದ್ರ(40) ಎಂಬಾತ ಕೃತ್ಯ ಎಸಗಿರುವ ಆರೋಪಿ. 8 ವರ್ಷದ ಬಾಲಕಿ ಪಾಲಕರು ಕೂಲಿ ಕೆಲಸಕ್ಕೆ ತೆರಳಿದ್ದ ವೇಳೆ ಬಾಲಕಿಯನ್ನು ಪುಸಲಾಯಿಸಿ ಕರೆದೊಯ್ದ ಈತ ಲೈಂಗಿಕ ದೌರ್ಜನ್ಯ ಎಸಗಿ ಬಳಿಕ ಜಮೀನಿಗೆ ತೆರಳಿದ್ದಾನೆ ಎಂದು ತಿಳಿದುಬಂದಿದೆ. ವಿಚಾರ ತಿಳಿದ ಗ್ರಾಮಸ್ಥರು ವೀರಭದ್ರನಿಗೆ ಗೂಸಾ ಕೊಟ್ಟು ಪೊಲೀಸರಿಗೆ ಒಪ್ಪಿಸಿದ್ದಾರೆ. ಕೊಳ್ಳೇಗಾಲ ಸರ್ಕಾರಿ ಉಪವಿಭಾಗ ಆಸ್ಪತ್ರೆಗೆ ಬಾಲಕಿಯನ್ನು ದಾಖಲು ಮಾಡಲಾಗಿದೆ.ಕೊಳ್ಳೇಗಾಲ ಗ್ರಾಮಾಂತರ ಠಾಣೆ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ. ಇನ್ನು, ಕೃತ್ಯ ಎಸಗಿರುವ ವೀರಭದ್ರ ವಿವಾಹಿತನಾಗಿದ್ದು ಎರಡು ಮಕ್ಕಳಿವೆ ಎಂದು ತಿಳಿದುಬಂದಿದೆ.

ರೈತನ ಜಮೀನಿನಲ್ಲಿ ಜಿಂಕೆ ಮೇಲೆ ಹುಲಿ ದಾಳಿ



ಗುಂಡ್ಲುಪೇಟೆ: ತಾಲೂಕಿನ ಪಡಗೂರು-ಕಲ್ಲಹಳ್ಳಿ ಮಾರ್ಗ ಮಧ್ಯದ ಜಮೀನೊಂದರಲ್ಲಿ ಗುರುವಾರ ಬೆಳಗ್ಗೆ ಹುಲಿ ದಾಳಿ ನಡೆಸಿ ಜಿಂಕೆಯೊಂದನ್ನು ಮೃತಪಡಿಸಿರುವ ಘಟನೆ ನಡೆದಿದೆ.

ಪಡಗೂರು ಅಡವಿ ಮಠದ ಶ್ರೀಗಳಿಗೆ ಸೇರಿದ ಜಮೀನಿನ ಪಕ್ಕದ ಬಯಲಲ್ಲಿ ಗುರುವಾರ ಬೆಳಗ್ಗೆ ಮೇವು ಮೇಯುತ್ತಿದ್ದ ಜಿಂಕೆಯ ಮೇಲೆ ಹುಲಿ ಏಕಾಏಕಿ ದಾಳಿ ನಡೆಸಿ ಕುತ್ತಿಗೆ ಭಾಗಕ್ಕೆ ಬಲವಾಗಿ ಕಚ್ಚಿದೆ. ಈ ವೇಳೆ ರೈತರು ಕೂಗಿಕೊಂಡ ಪರಿಣಾಮ ಜಿಂಕೆ ಬಿಟ್ಟು ಓಡಿ ಹೋಗಿದೆ. ನಂತರ ಜಿಂಕೆಗೆ ಸೂಕ್ತ ಚಿಕಿತ್ಸೆ ಸಿಗದ ಪರಿಣಾಮ ಕೆಲಕಾಲ ಒದ್ದಾಡಿ ಸಾವನ್ನಪ್ಪಿದೆ ಎಂದು ಸ್ಥಳೀಯ ರೈತರು ಮಾಹಿತಿ ನೀಡಿದರು.

ಜಿಂಕೆ ಒದ್ದಾಟದ ವೀಡಿಯೋವನ್ನು ರೈತರು ಸೆರೆ ಹಿಡಿದು ಅರಣ್ಯ ಇಲಾಖೆ ಗಮನಕ್ಕೆ ತಂದಿದ್ದಾರೆ.

ಲೋಕಸಭಾ ಚುನಾವಣೆ ಮತ ಎಣಿಕೆ

ನಿಷೇಧಾಜ್ಞೆ ವಿಧಿಸಿ ಜಿಲ್ಲಾಧಿಕಾರಿ ಆದೇಶ

ಕಾಯಕಯೋಗಿ ಸುದ್ದಿ

ಚಾಮರಾಜನಗರ: ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಮತ ಎಣಿಕೆ ಕಾರ್ಯವು ನಗರದ ನಂಜನಗೂಡು ರಸ್ತೆಯಲ್ಲಿರುವ ಬೇಡರಪುರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಜೂನ್ 4 ರಂದು ನಡೆಯಲಿದ್ದು, ಚುನಾವಣೆ ಫಲಿತಾಂಶದ ನಿರೀಕ್ಷೆಯಲ್ಲಿ ಹೆಚ್ಚು ಜನರು ಆಗಮಿಸುವ ನಿರೀಕ್ಷೆ ಇರುವುದರಿಂದ ಮತ್ತು ಸಾರ್ವಜನಿಕರ ಶಾಂತಿ, ನೆಮ್ಮದಿ ಕದಡುವ ಕಾನೂನು ಸುವ್ಯವಸ್ಥೆಗೆ ಭಂಗ ಬರುವ ಸಾಧ್ಯತೆಗಳಿರುವುದರಿಂದ ಚಾಮರಾಜನಗರ ಜಿಲ್ಲೆಯಾದ್ಯಂತ ಮೆರವಣಿಗೆ, ಸಭೆ, ಸಮಾರಂಭ, ಪಟಾಕಿ ಸಿಡಿಸುವುದು, ಗುಂಪುಗೂಡುವುದು ಇತ್ಯಾದಿಗಳನ್ನು ನಿಷೇಧಿಸಿ ಜೂನ್ 3ರ ಬೆಳಿಗ್ಗೆ 6 ಗಂಟೆಯಿಂದ ಜೂನ್ 4ರ ಮಧ್ಯರಾತ್ರಿ 12 ಗಂಟೆಯವರೆಗೆ ಜಿಲ್ಲೆಯಾದ್ಯಂತ ಕೆಲ ಷರತ್ತುಗಳನ್ನು ವಿಧಿಸಿ ನಿಷೇಧಾಜ್ಞೆಯನ್ನು ಜಾರಿ ಮಾಡಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ.

ಮತ ಎಣಿಕೆ ಕೇಂದ್ರದ ಸುತ್ತಾ 200 ಮೀ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ವಿಧಿಸಲಾಗಿದೆ. ಜಿಲ್ಲಾ ವ್ಯಾಪ್ತಿಯಲ್ಲಿ 5ಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಮೆರವಣಿಗೆ ಅಥವಾ ಸಭೆ ಸಮಾರಂಭ ಜರುಗಿಸುವುದನ್ನು ನಿಷೇಧಿಸಿದೆ. ಚುನಾವಣಾ ಅಭ್ಯರ್ಥಿ, ಬೆಂಬಲಿಗರು ಸೇರಿ 5 ಜನರಿಗಿಂತ ಹೆಚ್ಚಿನ ಸಂಖ್ಯೆಯ ಜನರು ಸೇರುವಂತಿಲ್ಲ. ಶಸ್ತ್ರ, ಬಡಿಗೆ, ಬರ್ಜಿ, ಖಡ್ಗ, ಗದೆ, ಬಂದೂಕು, ಚೂರಿ, ಲಾಠಿ, ದೊಣ್ಣೆ, ಚಾಕು ಅಥವಾ ದೇಹಕ್ಕೆ



ಅಪಾಯವನ್ನು ಉಂಟು ಮಾಡಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವುದನ್ನು ಮತ್ತು ಅವುಗಳೊಂದಿಗೆ ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ.

ಕಲ್ಲುಗಳು, ಕ್ಷಾರಪದಾರ್ಥ ಇಲ್ಲವೆ ಸ್ಫೋಟಕ ವಸ್ತುಗಳು, ಯಾವುದೇ ದಾಹಕ ವಸ್ತುಗಳು ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಹಾಗೂ ಶೇಖರಿಸುವುದನ್ನು ನಿಷೇಧಿಸಲಾಗಿದೆ. ಕಲ್ಲುಗಳನ್ನು ಮತ್ತು ಎಸೆಯುವಂತಹ ವಸ್ತುಗಳನ್ನು, ಎಸೆಯುವ ಅಥವಾ ಬಿಡುವ ಸಾಧನಗಳನ್ನು ತೆಗೆದುಕೊಂಡು ಹೋಗುವಂತಿಲ್ಲ. ಮನುಷ್ಯ ಶವಗಳ ಅಥವಾ ಅವುಗಳ ಆಕೃತಿ ಅಥವಾ ಪ್ರತಿಮೆಗಳ ಪ್ರದರ್ಶನ, ದಹನ ಮಾಡುವುದನ್ನು ಪ್ರತಿಬಂಧಿಸಲಾಗಿದೆ. ಸದರಿ ಸ್ಥಳದಲ್ಲಿ ಬಹಿರಂಗವಾಗಿ ಘೋಷಣೆ ಮಾಡುವುದು, ಪದ ಹಾಡುವುದು, ವಾದ್ಯ ಬಾರಿಸುವುದು, ವ್ಯಾಖ್ಯಾನ ಕೊಡುವುದು, ಸನ್ನೆ ಅಥವಾ ನಕಲಿ ಪ್ರದರ್ಶನವನ್ನು ಹಾಗೂ ಸಾರ್ವಜನಿಕ ಸಭ್ಯತೆ ಅಥವಾ ನೀತಿಯನ್ನು ಆಕ್ರಮಿಸಬಹುದಾದ ಕೃತ್ಯಗಳನ್ನು ಮಾಡಬಾರದು.

ಸಾರ್ವಜನಿಕವಾಗಿ ಯಾವುದೇ ವ್ಯಕ್ತಿ ಪ್ರಚೋದನಾತ್ಮಕ ಹಾಗೂ ಉದ್ರೇಕಕಾರಿ ಹಾಡುಗಳು, ಕೂಗಾಟ ಮಾಡುವುದನ್ನು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು, ಚಿಹ್ನೆಗಳು, ಪ್ರತಿಕೃತಿಗಳು ಮುಂತಾದವುಗಳನ್ನು ಪ್ರದರ್ಶಿಸುವುದಾಗಲಿ ಹಾಗೂ ಸಾರ್ವಜನಿಕ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಅಥವಾ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ.


ಯಾವುದೇ ವ್ಯಕ್ತಿ ಬಹಿರಂಗವಾಗಿ ಮೇಲೆ ವಿವರಿಸಿದ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು, ವಿನಾಶಕಾರಿ ವಸ್ತುಗಳು ಹಾಗೂ ಇತರೆ ಆಕ್ಷೇಪಾರ್ಹ ವಸ್ತುಗಳನ್ನು ಹೊಂದಿದ್ದು ಕಂಡು ಬಂದ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಪೊಲೀಸರಿಗೆ ಅಧಿಕಾರ ನೀಡಲಾಗಿದೆ. ಅಂತಹ ಮಾರಕಾಸ್ತ್ರಗಳನ್ನು ಸರಕಾರಕ್ಕೆ ಮುಟ್ಟುಗೋಲು ಮಾಡಿಕೊಳ್ಳಲಾಗುವುದು. ಅಲ್ಲದೇ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.

ಶವ ಸಂಸ್ಕಾರಕ್ಕೆ ಅಥವಾ ಮದುವೆ ಮತ್ತು ಧಾರ್ಮಿಕ ಮೆರವಣಿಗೆಗಳಿಗೆ ಈ ಆಜ್ಞೆ ಅನ್ವಯಿಸುವುದಿಲ್ಲ. ಮದುವೆ ಮತ್ತು ಇತರೆ ಧಾರ್ಮಿಕ ಮೆರವಣಿಗೆಗಳು ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಹಾಗೂ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರದಂತೆ ಹಾಗೂ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

ಮತ ಎಣಿಕೆ ಕೇಂದ್ರದ ಸುತ್ತಾ 200 ಮೀಟರ್ ಅಂತರದಲ್ಲಿ ಮೊಬೈಲ್ ಫೋನ್, ಕಾರ್ಡಲೆಸ ಫೋನ್ ಅಥವಾ ಇನ್ನಿತರೆ ಎಲೆಕ್ಟ್ರಾನಿಕ್ಸ್ ಉಪಕರಣಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. (ಚುನಾವಣಾ ಕಾರ್ಯದಲ್ಲಿ ಜಿಲ್ಲಾ ಚುನಾವಣಾಧಿಕಾರಿ/ ಚುನಾವಣಾಧಿಕಾರಿ ಅವರಿಂದ ಅನುಮತಿ ಪಡೆದ ಅಧಿಕಾರಿಗಳು/ ಸಿಬ್ಬಂದಿಗಳು ಹೊರತುಪಡಿಸಿದೆ)

ಮತ ಎಣಿಕೆ ಕೇಂದ್ರಗಳ ಸುತ್ತಾ 200 ಮೀಟರ್ ಪರಿಮಿತಿಯಲ್ಲಿ ಪೋಸ್ಟರ್, ಬ್ಯಾನರ್ ಅಥವಾ ಇನ್ನಾವುದೇ ವಸ್ತುಗಳನ್ನು ಬಳಸುವಂತಿಲ್ಲ. ಈ ಅವಧಿಯಲ್ಲಿ ಧ್ವನಿವರ್ಧಕಗಳನ್ನು ಬಳಸುವಂತಿಲ್ಲ.

ಸದರಿ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಭಾರತೀಯ ದಂಡ ಸಂಹಿತೆಯ 188ರ ಪ್ರಕಾರ ಕ್ರಮ ಜರುಗಿಸಲಾಗುವುದು. ಈ ಆದೇಶವು ಮತ ಎಣಿಕೆ ಅಧಿಕಾರಿಗಳು, ಸಿಬ್ಬಂದಿ, ಪೊಲೀಸ್ ಅಧಿಕಾರಿಗಳಿಗೆ ಹಾಗೂ ಚುನಾವಣಾ ಕಾರ್ಯನಿರತ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಹಾಗೂ ಚುನಾವಣಾ ಅಭ್ಯರ್ಥಿಗಳು, ಚುನಾವಣಾ ಏಜೆಂಟರುಗಳಿಗೆ ಅನ್ವಯಿಸುವುದಿಲ್ಲ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.



ಹೊಸದೊಡ್ಡಿಯಲ್ಲಿ ಗ್ರಾಮದೇವಿ ಜಾತ್ರೆ

ಕಾಯಕಯೋಗಿ ಸುದ್ದಿ

ಹನೂರು: ತಾಲೂಕಿನ ಪಿಜಿ ಪಾಳ್ಯ ಪಂಚಾಯಿತಿ ವ್ಯಾಪ್ತಿಯ ಹೊಸದೊಡ್ಡಿ ಗ್ರಾಮದ ಉರಗತಮ ಚಾಮುಂಡೇಶ್ವರಿ ಮತ್ತು ಲೊಕ್ಕನಹಳ್ಳಿ ಗ್ರಾಮದಲ್ಲಿನೆಡೆದ ಆದಿ ಜಾಂಬವ ಸಮುದಾಯದ ಬೀದಿಯಲ್ಲಿ ನಡೆದ ಗ್ರಾಮ ದೇವತೆ ಹಬ್ಬದ ಪ್ರಯುಕ್ತ ಶಾಸಕ ಎಂ ಆರ್ ಮಂಜುನಾಥ್ ರವರು ಗ್ರಾಮಕ್ಕೆ ಭೇಟಿ ನೀಡಿದೇವರ ದರ್ಶನ ಪಡೆದರು.

ನಂತರ ಶಾಸಕ ಎಂಆರ್ ಮಂಜುನಾಥ್ ಅವರು ಮಾತನಾಡಿ ಆ ಚಾಮುಂಡೇಶ್ವರಿ ತಾಯಿ ಗ್ರಾಮದ ಪ್ರತಿಯೊಬ್ಬರಿಗೂ ಆರೋಗ್ಯ ಐಶ್ವರ್ಯ, ಸುಖ ಶಾಂತಿ ನೆಮ್ಮದಿ ಕರುಣಿಸಲಿ, ಕಾಲಕಾಲಕ್ಕೆ ತಕ್ಕಂತೆ ಮಳೆ ಬೆಳೆ ಲಬಿಸಲಿ ಎಂದು ಪ್ರಾರ್ಥಿಸಿದರು.

ಗ್ರಾಮದ ಎಲ್ಲರ ಮನೆಗಳಿಗೆ ಭೇಟಿ ನೀಡಿ ಗ್ರಾಮಸ್ಥರಿಗೆ ಹಬ್ಬದ ಶುಭಾಶಯಗಳನ್ನು ತಿಳಿಸಿ ಮುಂದಿನ ದಿನಗಳಲ್ಲಿ ಗ್ರಾಮಕ್ಕೆ ಭೇಟಿ ನೀಡಿ ಸಮಸ್ಯೆಗಳನ್ನು ಬಗೆಹರಿಸಲು ಮುಂದಾಗುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಜೆಡಿಎಸ್ ಪಕ್ಷದ ಮುಖಂಡರು ಕಾರ್ಯಕರ್ತರು ಸದಸ್ಯರು, ಭಾಗವಹಿಸಿದ್ದರು.

ಪೊಲೀಸರ ಸಮ್ಮುಖದಲ್ಲಿ ಶ್ರೀ ಮಲೆ ಮಾದೇಶ್ವರದಲ್ಲಿ ಹುಂಡಿ ಎಣಿಕೆ



ಕಾಯಕಯೋಗಿ ಸುದ್ದಿ

ಹನೂರು: ಪ್ರಸಿದ್ಧ ಯಾತ್ರಾಸ್ಥಳ ಶ್ರೀ ಮಲೆ ಮಾದೇಶ್ವರದಲ್ಲಿ ಹುಂಡಿ ಎಣಿಕೆ ಕಾರ್ಯಕ್ರಮ 29.05.2024ರ ಬುಧವಾರ ನಡೆಯಿತು.

ಮಲೆ ಮಹದೇಶ್ವರ ಬೆಟ್ಟದ ಬಸ್ ನಿಲ್ದಾಣದ ಹತ್ತಿರವಿರುವ ವಾಣಿಜ್ಯ ಸಂಕೀರ್ಣ ಮಳಿಗೆಯಲ್ಲಿ ಸಿ ಸಿ ಕ್ಯಾಮೆರಾ ಕಣ್ಗಾವಲಿನಲ್ಲಿ ಹಾಗೂ ಪೊಲೀಸ್ ಬಂದೋಬಸ್ ನಲ್ಲಿ ಸಾಲೂರು ಬೃಹನ್ ಮಠದ ಪೀಠಾಧ್ಯಕ್ಷರಾದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮಿಗಳ ಅಧ್ಯಕ್ಷತೆಯಲ್ಲಿ ಹುಂಡಿಯ ಎಣಿಕೆ ಕಾರ್ಯಕ್ರಮ ನಡೆಯಿತು.

ರಾಜ್ಯದ ಮೂಲೆ ಮೂಲೆಗಳಿಂದ ಲಕ್ಷಾಂತರ ಭಕ್ತಾದಿಗಳು ಅಮಾವಾಸ್ಯೆ ಹುಣ್ಣಿಮೆ ಹಬ್ಬ ಹರಿದಿನಗಳ ಪ್ರಯುಕ್ತ ಹಾಗೂ ಕಾಲ್ನಡಿಗೆಯಲ್ಲಿ ಮಾದಪ್ಪನಿಗೆ ವಿಶೇಷ ಪೂಜೆ ಸಲ್ಲಿಸಿದರು.

ಸುಮಾರು 30 ದಿನಗಳ ಸಮಯದಲ್ಲಿ ಮಲೆ ಮಾದೇವಪ್ಪನ ಭಕ್ತಾದಿಗಳು ಕಾಣಿಕೆ ರೂಪದಲ್ಲಿ 2,58,44,097 ರೂ ಹಾಗೂ ಚಿನ್ನ 0.93ಗ್ರಾಂ, ಬೆಳ್ಳಿ3ಕೆಜಿ 350ಗ್ರಾಂ ಸಂಗ್ರಹವಾಗಿದೆ.

ಹಳೆಯ 2000ರೂ ಮುಖಬೆಲೆಯ 25 ನೋಟುಗಳು ಹುಂಡಿಯಲ್ಲಿ ದೊರೆತಿದೆ, ವಿದೇಶಿ ನೋಟುಗಳು 04

ಸೌದಿ ಅರೇಬಿಯಾ, ಜಪಾನ್ ನೇಪಾಳ, ಕತಾರ್ ಎಣಿಕೆ ಹುಂಡಿಯಲ್ಲಿ ಸಂಗ್ರಹವಾಗಿದೆ.

ಈ ಸಂದರ್ಭದಲ್ಲಿ ಪ್ರಾಧಿಕಾರದ ಕಾರ್ಯದರ್ಶಿ ಎ, ಈ.ರಘು, ಉಪ ಕಾರ್ಯದರ್ಶಿ ಬಿ ಎಲ್. ಚಂದ್ರಶೇಖರ್, ಬ್ಯಾಂಕ್ ಆಫ್ ಬರೋಡ ಕೊಳ್ಳೇಗಾಲ ಶಾಖೆ ವ್ಯವಸ್ಥಾಪಕರು, ಲೆಕ್ಕಾಧಿಕ್ಷಕರಾದ ನಾಗೇಶ್, ಮುಜರಾಯಿ ಇಲಾಖೆಯ ಶ್ವೇತಾ, ಸೇರಿದಂತೆ ಪೊಲೀಸ್ ಅಧಿಕಾರಿಗಳು ಇನ್ನಿತರರು ಇದ್ದರು.



ಬಿ ಕೃಷ್ಣಪ್ಪ ಅವರ 88ನೇ ಜನ್ಮದಿನಾಚರಣೆ:

ದಸಂಸ ಪೂರ್ವಭಾವಿ ಸಭೆ

ಕಾಯಕಯೋಗಿ ಸುದ್ದಿ

ಹನೂರು: ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ರಾಜ್ಯ ಸಮಿತಿ ಹನೂರು ಘಟಕದ ವತಿಯಿಂದ ಪೂರ್ವಭಾವಿ ಸಭೆ ನಡೆಯಿತು.

ಪಟ್ಟಣದ ಆರ್ ಎಂ ಸಿ ಆವರಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಿ ಮಾತನಾಡಿದ ದಲಿತ ಸಂಘರ್ಷ ಸಮಿತಿಯ ಮೈಸೂರು ವಿಭಾಗೀಯ ಸಂಚಾಲಕ ದೊಡ್ಡಿಂದುವಾಡಿ ಸಿದ್ದರಾಜ್ ಅವರು ಮಾತನಾಡಿದರು ಪ್ರೊಫೆಸರ್ ಬಿ ಕೃಷ್ಣಪ್ಪ ಅವರ 88ನೇ ಜನ್ಮ ದಿನಾಚರಣೆ ಅಂಗವಾಗಿ 9.06.2024 ರಂದು ಬೆಂಗಳೂರಿನಲ್ಲಿ ನೆಡೆಯುವ ಕಾರ್ಯಕ್ರಮಕ್ಕೆ ಹನೂರು ಘಟಕದ ವತಿಯಿಂದ ಸುಮಾರು ನೂರು ಸದಸ್ಯರು ಡಿ ಕೃಷ್ಣಪ್ಪ ಅವರ ಹುಟ್ಟುಹಬ್ಬಕ್ಕೆ ಕಾರ್ಯಕ್ರಮಕ್ಕೆ ಹೊರಡಬೇಕಾಗಿ ತಿಳಿಸಿದರು. ಕಾರ್ಯಕ್ರಮಕ್ಕೆ ಹೊರಡಲು ಬಸ್ ವ್ಯವಸ್ಥೆ ಇರುತ್ತದೆ ಎಂದರು.

ಪ್ರೊಫೆಸರ್ ಬಿ. ಕೃಷ್ಣಪ್ಪ ಅವರು ದಲಿತರ ಸಮುದಾಯಗಳ ಮೇಲೆ ಶೋಷಣೆ ಹಿಂಸೆ ದೌರ್ಜನ್ಯ ಗಳ ವಿರುದ್ಧ ಧ್ವನಿ ಎತ್ತಿ ತಮ್ಮ ತನು, ಮನ ಧನ ದಾರೆಯಾರಿದು ದಲಿತ ಸಮುದಾಯ, ಶೋಷಣೆಗೆ ಒಳಗಾದ ಎಲ್ಲಾ ಸಮುದಾಯವನ್ನು ಒಗ್ಗೂಡಿಸಿ ಅವರ ಏಳಿಗೆಗೆ ದುಡಿದ ಮಹಾನ್ ವ್ಯಕ್ತಿ ಎಂದರು. ಆದರಿಂದ ಕಾರ್ಯಕರ್ತ ಇಂಥ ಮಹಾನ್ ವ್ಯಕ್ತಿಯ ಜನ್ಮಾಚರಣೆ ಕಾರ್ಯಕ್ರಮಕ್ಕೆ ಆಗಮಿಸಬೇಕಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಹನೂರು ತಾಲೂಕು ದಲಿತ ಸಂಘರ್ಷ ಸಮಿತಿ ಸಂಚಾಲಕ ಮಾದೇಶ್, ಜಿಲ್ಲಾ ಸಂಚಾಲಕ ವೀರ, ಸಂಘಟನಾ ಸಂಚಾಲಕ ಮುರುಗೇಶ್, ಕೊಳ್ಳೇಗಾಲ ತಾಲೂಕು ದಲಿತ ಸಂಘರ್ಷ ಸಮಿತಿ ಸಂಚಾಲಕ ಶಿವ ಸ್ವಾಮಿ, ಕೊಳ್ಳೇಗಾಲ ಮಹಿಳಾ ಘಟಕ ಸಂಚಾಲಕಿ ವರಲಕ್ಷ್ಮಿ, ಹನೂರು ಮಹಿಳಾ ಘಟಕ ಕಿಶೋರ್ ವಳ್ಳಿ, ಜಿಲ್ಲಾ ಸಂಘಟನಾ ಸಂಚಾಲಕ ಹಿಂಡಯ್ಯ, ಸುಂದರಮ್ಮ,ಮರಿಯಮ್ಮ, ಶಿವಮ್ಮ, ಹನೂರ್ ನಾಗರಾಜ್ ಸೇರಿದಂತೆ ಇನ್ನಿತರ ದಲಿತ ಸಂಘರ್ಷ ಸಮಿತಿ ಸದಸ್ಯರು ಇದ್ದರು.

ವಿಧಾನಪರಿಷತ್ ಚುನಾವಣೆ: ಜಾತ್ರೆ ನಿಷೇಧ

ಚಾಮರಾಜನಗರ: ಕರ್ನಾಟಕ ವಿಧಾನಪರಿಷತ್ತಿಗೆ ಕರ್ನಾಟಕ ನೈರುತ್ಯ ಪದವೀಧರರ ಕ್ಷೇತ್ರ, ನೈರುತ್ಯ ಶಿಕ್ಷಕರ ಕ್ಷೇತ್ರ ಮತ್ತು ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರಗಳ ಚುನಾವಣೆ 2024ಕ್ಕೆ ಸಂಬಂಧಿಸಿದಂತೆ ಚಾಮರಾಜನಗರ ಜಿಲ್ಲಾ ವ್ಯಾಪ್ತಿಯಲ್ಲಿ ಜೂನ್ 3ರಂದು ಮತದಾನ ನಡೆಯಲಿದ್ದು, ಮತಕೇಂದ್ರದ ವ್ಯಾಪ್ತಿಯ ಪ್ರದೇಶಗಳಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಾಗೂ ಮತದಾರರು ಮತ ಹಾಕಲು ಅನುಕೂಲ ಕಲ್ಪಿಸುವ ಹಿತದೃಷ್ಟಿಯಿಂದ ಜೂನ್ 3ರಂದು ಬೆಳಿಗ್ಗೆ ಬೆಳಿಗ್ಗೆ 5 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ಜಿಲ್ಲೆಯಾದ್ಯಂತ ಎಲ್ಲಾ ವಿಧದ ಸಂತೆ ಮತ್ತು ಜಾತ್ರೆಗಳನ್ನು ನಡೆಸದಂತೆ ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ.

ಗ್ರಾಮ ದೇವತೆ ಮಾರಮ್ಮ ಜಾತ್ರಾ ಮಹೋತ್ಸವ

ಕಾಯಕಯೋಗಿ ಸುದ್ದಿ

ಹನೂರು: ತಾ

ದ್ವೈವಾರ್ಷಿಕ ಚುನಾವಣೆ: ಜೂ.೦3 ರಂದು ವಿಶೇಷ ಸಾಂದರ್ಭಿಕ ರಜೆ ಘೋಷಣೆ

ರಾಮನಗರ: ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳಿಗೆ ದ್ವೈವಾರ್ಷಿಕ ಚುನಾವಣೆಯನ್ನು ನಡೆಸಲು ಘೋಷಿಸಲಾಗಿರುತ್ತದೆ. ವಿಧಾನ ಪರಿಷತ್ ಮತ ಕ್ಷೇತ್ರಗಳಲ್ಲಿನ ಸರ್ಕಾರಿ ಹಾಗೂ ಖಾಸಗಿ ಶಾಲಾ ಕಾಲೇಜುಗಳು, ಅನುದಾನಿತ ಹಾಗೂ ಅನುದಾನ ರಹಿತ ವಿದ್ಯಾ ಸಂಸ್ಥೆಗಳು, ಎಲ್ಲಾ ಶೈಕ್ಷಣಿಕ ಸಂಸ್ಥೆಗಳು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಕಚೇರಿಗಳು, ರಾಷ್ಟ್ರೀಕೃತ ಹಾಗೂ ಇತರ ಬ್ಯಾಂಕುಗಳು, ಕೇಂದ್ರ ಹಾಗೂ ಸರ್ಕಾರದ ಕಾರ್ಖಾನೆಗಳು, ಉಳಿದ ಕೈಗಾರಿಕೆ ಸಂಸ್ಥೆಗಳು ಹಾಗೂ ಸಹಕಾರ ರಂಗದ ಸಂಘ ಸಂಸ್ಥೆಗಳಲ್ಲಿ ಎಲ್ಲಾ ವ್ಯವಹಾರಿಕ ಸಂಸ್ಥೆಗಳಲ್ಲಿ ಔದ್ಯಮಿಕ ಸಂಸ್ಥೆಗಳಲ್ಲಿ ಮತ್ತು ಎಸ್ಟಾಬ್ಲಿಷ್‌ಮೆಂಟ್‌ಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುವ ಪದವೀಧರರು ಹಾಗೂ ಶಿಕ್ಷಕರು ಮತದಾನ ಮಾಡಲು ಅನುಕೂವಲಾಗುವಂತೆ ಅಂತಹ ಅರ್ಹ ಮತದಾರರಿಗೆ ಸೀಮಿತವಾದಂತೆ ಮತ ಚಲಾಯಿಸಲಿರುವ ಮತದಾರರಿಗೆ ಜೂ. 3ರ ಸೋಮವಾರದಂದು ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲಾಗಿದೆ ಎಂದು ಸರ್ಕಾರದ ಅಧೀನ ಕಾರ್ಯದರ್ಶಿಗಳಾದ ವಿಜಯ್ ಕುಮಾರ್ ಎಚ್.ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಮನಗರ: ದಾಖಲಾತಿ ಪ್ರಾರಂಭ

ರಾಮನಗರ: ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಮಾಗಡಿ ತಾಲ್ಲೂಕಿನಲ್ಲಿರುವ ಬಾಲಕ/ಬಾಲಕಿಯರ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ 5ನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ಹಾಗೂ ಸರ್ಕಾರಿ ವಾಲ್ಮೀಕಿ ಆಶ್ರಯ ಶಾಲೆ ಜೋಡಗಟ್ಟೆಯಲ್ಲಿ 1 ರಿಂದ 5ನೇ ತರಗತಿಯವರೆಗೂ ದಾಖಲಾತಿ ಪ್ರಾರಂಭವಾಗಿದೆ.

ಆಸಕ್ತರು ಆನ್‌ಲೈನ್ ಮೂಲಕ ಸಮಾಜ ಕಲ್ಯಾಣ ಇಲಾಖಾ ವೆಬ್‌ಸೈಟ್ ಗಣಣಥಿ://ತಿ.ಇಚಿಡಿ.ಟಿಬಿಥಿ.ಟಿ ರಲ್ಲಿ ಅರ್ಜಿ ಸಲ್ಲಿಸುವುದು. ಅರ್ಜಿ ಸಲ್ಲಿಸಿದ ನಂತರ ದಾಖಲಾತಿಗಳೊಂದಿಗೆ ಅರ್ಜಿಯನ್ನು ಸಂಬಂಧಪಟ್ಟ ನಿಲಯದ ವಾರ್ಡನ್/ಕಚೇರಿಯಲ್ಲಿ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು (ಗ್ರೇಡ್–2), ಸಮಾಜ ಕಲ್ಯಾಣ ಇಲಾಖೆ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ, ಸರ್ಕಾರಿ ಕಚೇರಿಗಳ ಸಂಕೀರ್ಣ, ತಿರುಮಲೆ ರಸ್ತೆ, ಮಾಗಡಿ ಈ ಕಚೇರಿಯನ್ನು ಸಂಪರ್ಕಿಸುವಂತೆ ಮಾಗಡಿ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್–2) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದ್ವೈವಾರ್ಷಿಕ ಚುನಾವಣೆ: ಒಣ ದಿನ ಘೋಷಣೆ

ರಾಮನಗರ: ಬೆಂಗಳೂರು ಪದವೀಧರರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ದ್ವೈವಾರ್ಷಿಕ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಜೂನ್ 3 ರಂದು ನಡೆಯುವ ಮತದಾನದ ದಿನ ಚುನಾವಣೆಯು ಶಾಂತಿ, ಮುಕ್ತ, ನ್ಯಾಯಯುತ ಮತ್ತು ನಿಷ್ಪಕ್ಷಪಾತವಾಗಿ ನಡೆಯುವ ಸಲುವಾಗಿ, ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು 1967ರ ನಿಯಮ 10(ಬಿ) ರನ್ವಯ ಹಾಗೂ ಪ್ರಜಾಪ್ರಾತಿನಿಧ್ಯ ಕಾಯ್ದೆ 1951ರ ಸೆಕ್ಷನ್ 135–ಸಿ ರಂತೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಜೂನ್ 1 ರಂದು ಸಂಜೆ 4 ಗಂಟೆಯಿಂದ ಜೂನ್ 3ರ ಸಂಜೆ 4 ಗಂಟೆಯವರೆಗೆ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರೀತಿಯ ಮದ್ಯದ ಸನ್ನದುಗಳನ್ನು ಮುಚ್ಚಲು ಹಾಗೂ ಮದ್ಯ ಮಾರಾಟ, ಹಂಚಿಕೆ, ಸಾಗಾಣಿಕೆಯನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ಆದೇಶಿಸಿದ್ದಾರೆ.

ಸ್ಕಿಜೋಫ್ರೀನಿಯಾ ಜಾಗೃತಿ ಜಾಥಾಕ್ಕೆ ಚಾಲನೆ

ಕಾಯಕಯೋಗಿ ಸುದ್ದಿ



ರಾಮನಗರ: ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಸ್ಕಿಜೋಫ್ರೀನಿಯಾ ಖಾಯಿಲೆಯಿಂದ ಮೃತ್ಯು ಸಂಭವ ಮತ್ತು ದೌಜನ್ಯವು ಸಮಾಜದ ಇತರೆ ಖಾಯಿಲೆಗಳುಳ್ಳ ಜನರಲ್ಲಿ ಹೋಲಿಸಿದರೆ 2–3 ಪಟ್ಟು ಹೆಚ್ಚಿನ ಮಟ್ಟದಲ್ಲಿ ಕಂಡುಬಂದಿದೆ, ಆತ್ಮಹತ್ಯೆ ಪ್ರಕರಣವು ಸಹ ಸ್ಕಿಜೋಫ್ರೀನಿಯಾ ಖಾಯಿಲೆಯಿಂದ ಬಳಲುತ್ತಿರುವವರಲ್ಲಿ ಸುಮಾರು 12 ಪಟ್ಟು ಅಧಿಕವಾಗಿ ಕಂಡುಬಂದಿದೆ ಸ್ಕಿಜೋಫ್ರೀನಿಯಾ ಎಂಬ ಮಾನಸಿಕ ಖಾಯಿಲೆಯನ್ನು ಚಿತ್ತವಿಕಲತೆ, ಚಿತ್ತಚಂಚಲತೆ ಅಥವಾ ಮಾನಸಿಕ ಅಸ್ವಸ್ಥತೆ ಎಂದು ಗುರುತಿಸಲಾಗಿದೆ. ಇಂತಹ ಸಮಸ್ಯೆಗಳುಳ್ಳ ವ್ಯಕ್ತಿಗಳನ್ನು ಗುರುತಿಸಿ ಆಪ್ತ ಸಮಾಲೋಚನೆ ಮೂಲಕ ಆತ್ಮ ಸ್ಥೈರ್ಯ ತುಂಬಿ ಚಿಕಿತ್ಸೆ ನೀಡುವ ಮೂಲಕ ಗುಣ ಪಡಿಸಬಹುದು ಎಂದು ಜಿಲ್ಲಾ ಮಾನಸಿಕ ಆರೋಗ್ಯಾಧಿಕಾರಿ ಡಾ. ಸಿ. ಮಂಜುನಾಥ್ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಘಟಕ, ವಿವಿಧ ಅಭಿವೃದ್ಧಿ ಇಲಾಖೆಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ವಿಶ್ವ ಸ್ಕಿಜೋಫ್ರೀನಿಯಾ ದಿನದ ಅಂಗವಾಗಿ ಆಯೋಜಿಸಲಾಗಿದ್ದ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ತಾವೆಲ್ಲರೂ ಜಾಗೃತರಾಗಿ ಸ್ಕಿಜೋಫ್ರೀನಿಯಾದಿಂದ ಬಳಲುತ್ತಿರುವವರಿಗೆ ಕುಟುಂಬದ ಸಹಕಾರ ಮತ್ತು ಆರೈಕೆಯಿಂದಾಗಿ ವ್ಯಕ್ತಿಯೂ ಬೇಗ ಚೇತರಿಸಿಕೊಳ್ಳುವಂತೆ ಮಾಡುವ ಮೂಲಕ ಸ್ಕಿಜೋಫ್ರೀನಿಯಾ ಸಮಾಜದ ದಯಾಳುತನದ ಶಕ್ತಿಯ ಆಚರಣೆಯಾಗಬೇಕೆಂದು ತಿಳಿಸಿದರು.

ಮನೋರೋಗ ತಜ್ಞರಾದ ಡಾ. ಆದರ್ಶ ಎ.ಎಂ ಅವರು ಮಾತನಾಡಿ, ಸ್ಕಿಜೋಫ್ರೀನಿಯಾ ರೋಗಿಗಳಲ್ಲಿ ಯಾರಿಗೂ ಕಾಣದ ವಸ್ತುಗಳು ಮತ್ತು ವ್ಯಕ್ತಿಗಳು ಖಾಯಿಲೆ ಇರುವ ವ್ಯಕ್ತಿಗಳಿಗೆ ಮಾತ್ರ ಕಾಣಿಸುವುದು. ಯಾರಿಗೂ ಕೇಳಿಸದ ಶಬ್ದಗಳು ಮತ್ತು ಧ್ವನಿಗಳು, ಮಾತುಗಳು ಖಾಯಿಲೆ ಇರುವ ವ್ಯಕ್ತಿಗೆ ಮಾತ್ರ ಕಾಣಿಸುವುದು. ಅತಿ ಹೆಚ್ಚು ಅನಿಸುವಷ್ಟು ಅನುಮಾನ, ವೈಯಕ್ತಿಕ ಸ್ವಚ್ಛತೆಯ ಬಗ್ಗೆ ಗಮನ ಕಡಿಮೆಯಾಗುವುದು ಅಥವಾ ವೈಯಕ್ತಿಕ ಸ್ವಚ್ಛತೆಯ ಬಗ್ಗೆ ಅರಿವೇ ಇಲ್ಲದಿರುವ ಸ್ಥಿತಿ ಮಾನಸಿಕ ಅಸ್ವಸ್ಥತೆ ಸಾಮಾನ್ಯವಾಗಿ ಪ್ರೌಢಾವಸ್ಥೆಯಲ್ಲಿ ಹಾಗೂ ಪ್ರೌಢಾವಸ್ಥೆಯ ಆರಂಭದ ಸಮಯದಲ್ಲಿ ಕಂಡು ಬರುತ್ತದೆ, ಮಕ್ಕಳಲ್ಲಿ ಅತೀ ಕಡಿಮೆ ಪ್ರಮಾಣದಲ್ಲಿ ಕಂಡುಬರುತ್ತದೆ ಎಂದರು.

ರೋಗ ಲಕ್ಷಣವು ಸಾಮಾನ್ಯವಾಗಿ ವಾರಗಳ ಹಾಗೂ ತಿಂಗಳುಗಳು ಕಳೆದಂತೆ ನಿಧಾನವಾಗಿ ಹೆಚ್ಚಾಗುತ್ತದೆ. ದಿನಕಳೆದಂತೆ ಭ್ರಮೆ, ತಪ್ಪು ಗ್ರಹಿಕೆ, ಗೊಂದಲದ ಯೋಚನೆಗಳು, ತರ್ಕ ಸಮಸ್ಯೆ, ಅಸಹಜ ನಡವಳಿಕೆ ಕಾಣಿಸಿಕೊಳ್ಳುತ್ತವೆ. ಆದ್ದರಿಂದ ಸಾರ್ವಜನಿಕರು ಇಂತಹ ವ್ಯಕ್ತಿಗಳು ಕಂಡು ಬಂದ ತಕ್ಷಣ ಅವರ ಕುಟುಂಬಸ್ಥರಿಗೆ ಮಾಹಿತಿ ನೀಡಿ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುವಂತೆ ತಿಳಿಸಿದರು.

ಜಿಲ್ಲಾ ಆರ್.ಸಿ.ಹೆಚ್.ಅಧಿಕಾರಿ ಡಾ. ರಾಜು ಅವರು ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಡಿ.ಎಲ್.ಓ ಅಧಿಕಾರಿಗಳಾದ ಡಾ. ಸಿ. ಮಂಜುನಾಥ್, ಡಿ.ಟಿ.ಓ ಅಧಿಕಾರಿಗಳಾದ ಡಾ. ಕುಮಾರ್, ಡಿ.ಎಂ.ಓ ಅಧಿಕಾರಿಗಳಾದ ಡಾ. ಶಶಿಧರ್, ಜಿಲ್ಲಾ ಮಾನಸಿಕ ಆರೋಗ್ಯ ಘಟಕದ ಸಿಬ್ಬಂದಿಗಳು ಪದ್ಮರೇಖಾ, ರಾಘವೇಂದ್ರ, ಪವಿತ್ರ, ಆರೋಗ್ಯ ಸಿಬ್ಬಂದಿ, ಅರೆ ವೈದ್ಯಕೀಯ ಶಿಬಿರಾರ್ಥಿಗಳು ಹಾಗೂ ಸಾರ್ವಜನಿಕರು ಹಾಜರಿದ್ದರು.



ಲೋಕಸಭಾ ಮತ ಎಣಿಕೆ: ಅಭ್ಯರ್ಥಿಗಳೊಂದಿಗೆ ಜಿಲ್ಲಾಧಿಕಾರಿ ಸಭೆ

ಕಾಯಕಯೋಗಿ ಸುದ್ದಿ

ಹಾಸನ: ಹಾಸನ ಲೋಕಸಭಾ ಕ್ಷೇತ್ರದ ಮತ ಎಣಿಕೆ ಜೂನ್ 4ರಂದು ನಡೆಯಲಿದ್ದು, ಈ ಪ್ರಯುಕ್ತ ಗುರುವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಭ್ಯರ್ಥಿಗಳೊಂದಿಗೆ ಸಭೆ ನಡೆಯಿತು.

ಜಿಲ್ಲಾಧಿಕಾರಿ ಸಿ.ಸತ್ಯಭಾಮಾ ಅವರು ಮಾತನಾಡಿ, ಮತ ಎಣಿಕೆ ಕೇಂದ್ರಕ್ಕೆ ಅಭ್ಯರ್ಥಿಗಳು, ಗುರುತಿನ ಚೀಟಿ ಹೊಂದಿರುವ ಏಜೆಂಟರಿಗೆ ಮಾತ್ರ ಪ್ರವೇಶ ನೀಡಲಾಗುವುದು. ಮೊಬೈಲ್, ಸ್ಮಾರ್ಟ್ ವಾಚ್ ಸೇರಿದಂತೆ ಡಿಜಿಟಲ್ ಸಾಧನಗಳನ್ನು ಕಡ್ಡಾಯವಾಗಿ ಎಣಿಕೆ ಕೇಂದ್ರದ ಒಳಗೆ ನಿರ್ಬಂಧಿಸಲಾಗಿದೆ. ಅಭ್ಯರ್ಥಿಗಳ ಏಜೆಂಟರು ನಿಗದಿತ ನಿಗದಿತ ಕೊಠಡಿ ಬಿಟ್ಟು ಬೇರೆಡೆಗೆ ತೆರಳುವಂತಿಲ್ಲ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಮಾತನಾಡಿ ವಿಜಯೋತ್ಸವ ನಡೆಸಲು ಅವಕಾಶವಿಲ್ಲ. ಮತ ಎಣಿಕೆ ಕೇಂದ್ರದ ವ್ಯಾಪ್ತಿಯಲ್ಲಿ ಪಾರ್ಕಿಂಗ್‌ಗೆ ನಿಗದಿತ ಸ್ಥಳ ವ್ಯವಸ್ಥೆ ಮಾಡಲಾಗಿದೆ. ಗುರುತಿನ ಚೀಟಿ ದುರುಪಯೋಗ ಕಂಡುಬಂದರೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಕೆ.ಟಿ. ಶಾಂತಲಾ, ಹಾಸನ ಲೋಕಸಭಾ ಕ್ಷೇತ್ರದ ವಿವಿಧ ಅಭ್ಯರ್ಥಿಗಳು ಉಪಸ್ಥಿತರಿದ್ದರು.

ಅರ್ಜಿ ಆಹ್ವಾನ

ರಾಮನಗರ: ರಾಮನಗರ ಜಿಲ್ಲಾಮಟ್ಟದ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟವರ್ಗದ ಅಲೆಮಾರಿ/ ಅರೆಅಲೆಮಾರಿ/ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಸಮುದಾಯಗಳ ಅಭಿವೃದ್ಧಿಗಾಗಿ ವಿಶೇಷ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಜಿಲ್ಲಾಮಟ್ಟದ ಸಮಿತಿಗೆ ಅಧಿಕಾರೇತರ ಸದಸ್ಯರುಗಳನ್ನು ಆಯ್ಕೆ ಮಾಡಲು ಷರತ್ತುಗಳಿಗೆ ಒಳಪಡಿಸಿ, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲಿ ಪೂರ್ಣ ವಿವರವನ್ನು ನಮೂದಿಸಿ, ಪೂರಕ ದಾಖಲೆಗಳ ಸಹಿತ ಜೂ. 13ರೊಳಗೆ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ, 2ನೇ ಮಹಡಿ, ಪಂಚಾಯತ್ ಭವನ, ಬಿ.ಎಂ.ರಸ್ತೆ, ರಾಮನಗರ ಇವರಿಗೆ ಸಲ್ಲಿಸುವಂತೆ ತಿಳಿಸಿದೆ. ಹೆಚ್ಚಿನ ಮಾಹಿತಿಗೆ ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ ಈ ಕಚೇರಿಯನ್ನು ಸಂಪರ್ಕಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸದಸ್ಯರ ಆಯ್ಕೆಗೆ ಅರ್ಜಿ ಆಹ್ವಾನ

ರಾಮನಗರ: ರಾಮನಗರ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಮೇಲ್ವಿಚಾರಣಾ ಸಮಿತಿಗೆ ಸದಸ್ಯರುಗಳನ್ನು ಆಯ್ಕೆ ಮಾಡಲು ನಿಬಂಧನೆಗಳಿಗೊಳಪಟ್ಟು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲಿ ಪೂರ್ಣ ವಿವರವನ್ನು ನಮೂದಿಸಿ, ಪೂರಕ ದಾಖಲೆಗಳ ಸಹಿತ ಜೂನ್ 17 ರೊಳಗೆ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ, 2ನೇ ಮಹಡಿ, ಪಂಚಾಯತ್ ಭವನ, ಬಿ.ಎಂ. ರಸ್ತೆ, ರಾಮನಗರ ಇವರಿಗೆ ಸಲ್ಲಿಸುವಂತೆ ತಿಳಿಸಿದೆ. ಹೆಚ್ಚಿನ ಮಾಹಿತಿಗೆ ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ ಈ ಕಚೇರಿಯನ್ನು ಸಂಪರ್ಕಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಆಹ್ವಾನ

ರಾಮನಗರ: ರಾಮನಗರದ ಸರ್ಕಾರಿ ಕಾನೂನು ಕಾಲೇಜಿನಲ್ಲಿ 2024–25ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿಗೆ ಸಂಬಂಧಿಸಿದಂತೆ 5 ವರ್ಷದ (ಬಿ.ಎ. ಎಲ್.ಎಲ್.ಬಿ) ಕಾನೂನು ಪದವಿ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಈಗಾಗಲೇ ಪ್ರವೇಶಾತಿ ಅರ್ಜಿಗಳನ್ನು ವಿತರಿಸುತ್ತಿದ್ದು, ಅರ್ಜಿ ಸಲ್ಲಿಸಲು ಜೂನ್ 20 ಕೊನೆಯ ದಿನವಾಗಿದೆ ಎಂದು ಸರ್ಕಾರಿ ಕಾನೂನು ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಐ.ಟಿ.ಐ: ಅರ್ಜಿ ಆಹ್ವಾನ

ರಾಮನಗರ: ರಾಜ್ಯದ ಎಲ್ಲಾ ಸರ್ಕಾರಿ ಐ.ಟಿ.ಐ ಗಳಿಗೆ ಆಗಸ್ಟ್–2024ನೇ ಸಾಲಿಗೆ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ರಾಜ್ಯದ ಯಾವುದೇ ಪ್ರದೇಶದಿಂದ ಸೈಬರ್ ಸೆಂಟರ್ ಮೂಲಕ ಅಥವಾ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಖುದ್ದಾಗಿ ಹಾಜರಾಗಿ www.cite.karnataka.gov.in ಈ ವೆಬ್‌ಸೈಟ್ ಮೂಲಕ ಜೂನ್ 3ರ ವರೆಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗೆ ಅಮರೇಶ, ತರಬೇತಿ ಅಧಿಕಾರಿ ಮೊ.ನಂ. 9449188993, ಗಿರೀಶ್ ಕುಮಾರ್ ಎಸ್., ಕಿರಿಯ ತರಬೇತಿ ಅಧಿಕಾರಿ ಮೊ.ನಂ. 7760023749 ಅಥವಾ ರೇಣುಕ ಈ, ಕಿರಿಯ ತರಬೇತಿ ಅಧಿಕಾರಿ ಮೊ.ನಂ. 9740065425 ಅನ್ನು ಸಂಪರ್ಕಿಸುವಂತೆ ಮಾಗಡಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎನ್.ಡಿ.ಎ ಮೈತ್ರಿ ಅಭ್ಯರ್ಥಿ ದೇವೆಗೌಡರನ್ನು ಗೆಲ್ಲಿಸುವಂತೆ ಮನವಿ

ಕಾಯಕಯೋಗಿ ಸುದ್ದಿ



ಕನಕಪುರ: ಮುಂಬರಲಿರುವ ವಿಧಾನಪರಿಷತ್ ಚುನಾವಣೆಯಲ್ಲಿ ಎನ್.ಡಿ.ಎ ಮೈತ್ರಿಕೂಟದ ಅಭ್ಯರ್ಥಿ ಅ ದೇವೇಗೌಡರನ್ನು ಬಹುಮತದಿಂದ ಆರಿಸಿ ಕಳಿಸುವಂತೆ ತಾಲೂಕು ಜೆಡಿಎಸ್ ಹಾಗು ಬಿಜೆಪಿ ಪಕ್ಷದ ಮುಖಂಡರುಗಳು ಕರೆ ನೀಡಿದ್ದಾರೆ. ಗುರುವಾರ ನಗರದ ಖಾಸಗಿ ಕಲ್ಯಾಣ ಮಂಟಪದಲ್ಲಿ ಜರುಗಿದ ಎನ್.ಡಿಎ ಮೈತ್ರಿಕೂಟದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ತಾಲೂಕು ಜೆಡಿಎಸ್ ಪಕ್ಷದ ಅಧ್ಯಕ್ಷ ಮೈತ್ರಿಕೂಟದ ಅಭ್ಯರ್ಥಿ ದೇವೇಗೌಡರು ವಿಧಾನ ಪರಿಷತ್ ಸದಸ್ಯರಾಗಿ ಪದವೀಧರರ ಸಮಸ್ಯೆಗಳಿಗೆ ಸ್ಪಂದಿಸಿ ವಿಧಾನ ಪರಿಷತ್ತಿನಲ್ಲಿ ಅವರ ಜ್ವಲಂತ ಸಮಸ್ಯೆಗಳಿಗೆ ಸದಾ ಹೋರಾಟ ಮಾಡುತ್ತಾ ಬರುತ್ತಿದ್ದು ಈ ಬಾರಿ ಚುನಾವಣೆಯಲ್ಲಿ ಅವರನ್ನು ಅಧಿಕ ಬೆಂಬಲದಿಂದ ಆರಿಸಿ ಕಳಿಸುವಂತೆ ಮನವಿ ಮಾಡಿದರು.

ರಾಜ್ಯ ಜೆಡಿಎಸ್ ಯುವ ಉಪಾಧ್ಯಕ್ಷ ಚಿನ್ನಸ್ವಾಮಿ ಮಾತನಾಡಿ ಎನ್. ಡಿ. ಎ. ಮೈತ್ರಿ ಅಭ್ಯರ್ಥಿ ಅ. ದೇವೇಗೌಡ ಪದವೀಧರ ಸಮಸ್ಯೆಗಳನ್ನು ಹಾಗೂ ಅವರ ನಾಡಿಮಿಡಿತವನ್ನು ಹತ್ತಿರದಿಂದ ಅರಿತಿದ್ದು ಅವರ ಯಾವುದೇ ಸಮಸ್ಯೆಗಳಿರಲಿ ಸರ್ಕಾರದ ಗಮನಕ್ಕೆ ತಂದು ಪರಿಹಾರ ದೊರಕಿಸಿ ಕೊಟ್ಟಿದ್ದಾರೆ ಈ ಚುನಾವಣೆಯಲ್ಲಿ ತಾಲೂಕಿನ ಪದವೀಧರ ಮತದಾರರು ಬಹುಮತದಿಂದ ಆರಿಸುವಂತೆ ಮನವಿ ಮಾಡಿದರು.

ಗ್ರಾಮಾಂತರ ಬಿಜೆಪಿ ಅಧ್ಯಕ್ಷ ಕೆ. ಪಿ. ಕುಮಾರ್ ಮಾತನಾಡಿ ಅ. ದೇವೇಗೌಡರು ಪದವೀಧರ ಯಾವುದೇ ಸಮಸ್ಯೆಗಳಿರಲಿ ಎದೆಗುಂದದೆ ಹೋರಾಟ ನಡೆಸುವ ಮೂಲಕ ಅವರ ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸುವಂತೆ ಒತ್ತಡ ತಂದು ಯಶಸ್ಸು ಗಳಿಸಿದ್ದಾರೆ ತಾಲೂಕಿನ ಪದವೀಧರ ಮತದಾರರು ಈ ಧೀಮಂತ ನಾಯಕನನ್ನು ಅಧಿಕ ಬಹುಮತದಿಂದ ಆರಿಸಿ ಕಳಿಸುವಂತೆ ಮನವಿ ಮಾಡಿದರು.

ಮೈತ್ರಿಕೂಟದ ಮುಖಂಡರುಗಳಾದ ಕಬ್ಬಾಳೇಗೌಡ,



ಕಿರಣ್ "ರಾಜ್ ರೀಲ್ಸ್ ಮಿಣ ಫ್ಯಾನ್ಸ್"

ಕಿರಣ್ ರಾಜ್ ಅಭಿನಯದ, ಗುರುತೇಜ್ ಶೆಟ್ಟಿ ನಿರ್ದೇಶನದ "ರಾನಿ ಚಿತ್ರದ ರೋಮ್ಯಾಂಟಿಕ್ ಹಾಡೊಂದು ಬಿಡುಗಡೆಯಾಗಿದೆ.

ರಾನಿ'' ಚಿತ್ರದ ಮೊದಲ ಪ್ರತಿ ಸಿದ್ಧವಾಗಿದ್ದು, ಜುಲೈ ತಿಂಗಳಲ್ಲಿ ಬಿಡುಗಡೆಯ ತಯಾರಿಯಲ್ಲಿದೆ.

ಪುಷ್ಪ 2 : ಎರಡನೇ ಹಾಡು ರಿಲೀಸ್..ದಿ ಕಪಲ್ ಸಾಂಗ್

ಗೆ ಅಲ್ಲು ಅರ್ಜುನ್-ರಶ್ಮಿಕಾ ಮಂದಣ್ಣ

ಅಲ್ಲು ಅರ್ಜುನ್ ನಟನೆಯ ಬಹುನಿರೀಕ್ಷಿತ ಸಿನಿಮಾ ಪುಷ್ಪ 2 ಅಂಗಳದಿಂದ ಎರಡನೇ ಹಾಡು ಬಿಡುಗಡೆಯಾಗಿದೆ. ದಿ ಕಪಲ್ ಸಾಂಗ್ ಗೆ ಪುಷ್ಪರಾಜ್ ಹಾಗೂ ಶ್ರೀವಲ್ಲಿ ಹೆಜ್ಜೆ ಹಾಕಿದ್ದಾರೆ. ಗಣೇಶ್ ಆಚಾರ್ಯ ನೃತ್ಯ ಸಂಯೋಜನೆಯಲ್ಲಿ ಮೂಡಿಬಂದಿರುವ ಹಾಡಿಗೆ ದೇವಿಶ್ರೀ ಪ್ರಸಾದ್ ಟ್ಯೂನ್ ಹಾಕಿದ್ದಾರೆ. ಕನ್ನಡ, ತೆಲುಗು, ತಮಿಳು, ಹಿಂದಿ, ಮಲಯಾಳಂ ಹಾಗೂ ಬೆಂಗಾಲಿ ಭಾಷೆಯಲ್ಲಿ ಸೆಕೆಂಡ್ ಸಾಂಗ್ ಬಿಡುಗಡೆಯಾಗಿದೆ. ಕನ್ನಡದ ಹಾಡಿಗೆ ವರದರಾಜು ಚಿಕ್ಕಬಳ್ಳಾಪುರ ಸಾಹಿತ್ಯ ಬರೆದಿದ್ದು, ಮೆಲೋಡಿ ಕ್ವೀನ್ ಶ್ರೇಯಾ ಘೋಷಾಲ್ ಆರು ಭಾಷೆಯ ಹಾಡಿಗೆ ಧ್ವನಿಯಾಗಿದ್ದಾರೆ.

ಪುಷ್ಪ ಸೀಕ್ವೆಲ್ ಟೀಸರ್ ಹಾಗೂ ಟೈಟಲ್ ಟ್ರ್ಯಾಕ್ ಈಗಾಗ್ಲೇ ಭಾರೀ ಸದ್ದು ಮಾಡಿದ್ದು, ಇದೀಗ ರಿಲೀಸ್ ಆಗಿರುವ ಸಾಂಗ್ ಕೂಡ ಸೆನ್ಸೇಷನ್ ಸೃಷ್ಟಿಸುವ ಎಲ್ಲಾ ಲಕ್ಷಣ ಕಾಣುತ್ತಿದೆ. ಅದ್ಧೂರಿ ಸೆಟ್ ನಲ್ಲಿ ರಶ್ಮಿಕಾ ಹಾಗೂ ಅಲ್ಲು ಅರ್ಜುನ್ ಹೆಜ್ಜೆ ಹಾಕಿದ್ದಾರೆ. ಇವರಿಬ್ಬರ ಆನ್ ಸ್ಕ್ರೀನ್ ಕೆಮಿಸ್ಟ್ರಿಗೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಪುಷ್ಪ ಪುಷ್ಪ ಹಾಡು 100 ಮಿಲಿಯನ್ಸ್ ವೀಕ್ಷಣೆ ಕಂಡಿದೆ, ಕಪಲ್ ಸಾಂಗ್ ಕೂಡ ದಾಖಲೆ ಬರೆಯಲಿದೆ ಎಂಬ ನಿರೀಕ್ಷೆ ಚಿತ್ರತಂಡದಲ್ಲಿದೆ. ತೆಲುಗಿನಲ್ಲಿ 'ಸೂಸೆಕಿ..', ಕನ್ನಡದಲ್ಲಿ 'ನೋಡೋಕ..' ಎಂದು ಹಾಡು ಶುರುವಾಗುವ ಹಾಡು ಕೇಳುಗರಿಗೆ ಕಿಕ್ ಕೊಡುತ್ತಿದೆ.ಈ ವರ್ಷದ ಬಹುನಿರೀಕ್ಷಿತ ಸಿನಿಮಾವಾಗಿರುವ ಪುಷ್ಪ 2 ಈ ಸಿನಿಮಾ ಆಗಸ್ಟ್ 15ರಂದು ಬಿಡುಗಡೆಯಾಗಲಿದೆ. ಈ ಚಿತ್ರಕ್ಕೆ ಸುಕುಮಾರ್ ಆಕ್ಷನ್ ಕಟ್ ಹೇಳಿದ್ದಾರೆ ಮೈತ್ರಿ ಮೂವೀ ಮೇಕರ್ಸ್ ದುಬಾರಿ ಬಜೆಟ್ ನಲ್ಲಿ ಚಿತ್ರ ನಿರ್ಮಾಣ ಮಾಡಿದೆ. ಈ ಸಿನಿಮಾದಲ್ಲಿ ಅಲ್ಲು ಅರ್ಜುನ್ ಗೆ ಜೊತೆಯಾಗಿ ಶ್ರೀವಲ್ಲಿಯಾಗಿ ರಶ್ಮಿಕಾ ಮಂದಣ್ಣ ನಟಿಸಿದ್ದಾರೆ. ಫಹದ್ ಫಾಸಿಲ್ , ಡಾಲಿ ಧನಂಜಯ್ ಸೇರಿದಂತೆ ಹಲವು ಕಲಾವಿದರು ನಟಿಸಿದ್ದಾರೆ.





ಮೋಡ ಕವಿದ ಮಂಜು

ನಾಯಕ ನಟರಾಗಿ ಚಲನಚಿತ್ರ ನಿರ್ಮಾಪಕರಾಗಿ ಚಿತ್ರೋದ್ಯಮ ಮತ್ತು ಪ್ರೇಕ್ಷಕರಿಗೆ ಪರಿಚಯವಿದ್ದ ರಘುವೀರ್ ರವರು ತಮ್ಮ ಸಂಗೀತ ಪ್ರತಿಭೆ ಅನಾವರಣಕ್ಕೆ ಆಯ್ಕೆ ಮಾಡಿಕೊಂಡ ಚಿತ್ರ ಮೋಡ ಕವಿದ ಮಂಜು.

ನಟ ರಘುವೀರ್ ಪ್ರಥಮ ಬಾರಿಗೆ ಸಂಗೀತ ಸಂಯೋಜನೆ ಮಾಡಿರುವ ಚಿತ್ರವಿದು. ಎಂ. ಸಿ. ಪ್ರೊಡಕ್ಷನ್ಸ್ ಮತ್ತು ಹ್ಯಾಟ್ರಿಕ್ ಪ್ರೊಡಕ್ಷನ್ಸ್ ನಂ 1 ಅರ್ಪಿಸುವ " ಮೋಡ ಕವಿದ ಮಂಜು " ಚಿತ್ರದ ಹಾಡುಗಳನ್ನು ರಘುವೀರ ಸಿದ್ಧಪಡಿಸಿದ ಇತ್ತೀಚೆಗೆ ರಘುವೀರ್ ಅವರ ಶಿಷ್ಯ. ಹ್ಯಾಟ್ರಿಕ್ ಸೂರ್ಯ ಪಿ. ಎನ್, ರವರು ಹಾಡುಗಳನ್ನು ಹುಡುಕಿ ಲಹರಿ ಆಡಿಯೋ ಕಂಪನಿಯ ಮಾಲೀಕರಾದ ಲಹರಿ ವೇಲು ರವರಿಗೆ ಒಪ್ಪಿಸಿದ್ದರು.ಲಹರಿ ಕಂಪನಿ ಜೊತೆ ಒಪ್ಪಂದ ಕೂಡಾ ಮಾಡಿಕೊಂಡಿದ್ದರು.

ಸೂರ್ಯ ರವರ ಪ್ರಯತ್ನ ಮತ್ತು ಲಹರಿ ವೇಲು ರವರ ಪ್ರೋತ್ಸಾಹ ದಿಂದಾಗಿ ಮೋಡ ಕವಿದ ಮಂಜು ಚಿತ್ರದ ಹಾಡುಗಳು ಲಹರಿ ಆಡಿಯೋ ಕಂಪನಿಬಿಡುಗಡೆ ಮಾಡಿತು.

ಕಾಮಿಡಿ ಕಿಲಾಡಿಗಳು ಖ್ಯಾತಿಯ ಜಿ.ಜಿ ಅವರು ಬರೆದಿರುವ ಹಾಡುಗಳನ್ನು ರಘುವೀರ್, ರಮೇಶ್ಚಂದ್ರ, ನಂದಿತಾ, ರಾಜೇಶ್ ಕೃಷ್ಣನ್ ಹಾಗೂ ಚೇತನ್ ಹಾಡಿದ್ದಾರೆ. ನಿವೃತ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಈ ಚಿತ್ರದ ಹಾಡುಗಳನ್ನು ಬಿಡುಗಡೆ ಮಾಡಿದರು.. ಲಹರಿ ವೇಲು ನಿರ್ದೇಶಕ ರಾಘವ ಲೋಕಿ, ನೀಲಕಂಠ ಅಡಿಗ, ಗಾಯಕ ರಮೇಶ್ ಚಂದ್ರ, ಯೋಧ ಎ. ವಿಜಯ್ ಕುಮಾರ್ ರೆಡ್ಡಿ, ಪಾಲ್ಗೊಂಡರು.

ನಾಡಪ್ರಭು 'ಕೆಂಪೇಗೌಡ' ಪಾತ್ರದಲ್ಲಿ ರಾಜವರ್ಧನ್



ಕೆಂಪೇಗೌಡರನ್ನ ಹೋಲುವ ಚಹರೆ ಇರೋ ರಾಜವರ್ಧನ್ ಗೆ ಈ ಅವಕಾಶ ಒಲಿದು ಬಂದಿದೆ. ಮಾತುಕಥೆಯ ಹಂತದಲ್ಲಿರೋ ಈ ಚಿತ್ರದ ಟೈಟಲ್ ಹಾಗೂ ಹಕ್ಕುಗಳ ವಿಚಾರಕ್ಕೆ ವಿವಾದ ಸೃಷ್ಟಿಯಾಗಿತ್ತು. ಈ ನಡುವೆ ರಾಜವರ್ಧನ್ ಕೆಂಪೇಗೌಡರ ಪಾತ್ರವನ್ನ ನಿಭಾಯಿಸಲಿರೋ ವಿಚಾರ ಕೇಳಿ ಬರ್ತಿದೆ. ಅದಕ್ಕೆ ಪುಷ್ಟಿ ನೀಡುವಂತೆ ರಾಜವರ್ಧನ್ ಚಹರೆಯ ವಿವಿಧ ಪಾತ್ರಗಳ ಎಐ ಫೋಟೋಗಳು ವೈರಲ್ ಆಗ್ತಿದೆ.



ಗುರುದತ್ ಗಾಣಿಗ ನಿರ್ಮಾಣ ನಿರ್ದೇಶನ ಮಾಡುತ್ತಿರೋ ಕರಾವಳಿ ಸಿನಿಮಾಗೆ ವಿಲನ್ ಎಂಟ್ರಿ ಆಗಿದೆ. ಪ್ರತಿ ಪಾತ್ರವರ್ಗವನ್ನ ವಿಭಿನ್ನ ರೀತಿಯಲ್ಲಿ ಇಂಟ್ರಡ್ಯೂಸ್ ಮಾಡುತ್ತಿರೋ ನಿರ್ದೇಶಕ ಗುರುದತ್ ಗಾಣಿಗ ಚಿತ್ರದ ಮತ್ತೊಂದು ಮುಖ್ಯಪಾತ್ರಧಾರಿಯನ್ನ ವಿಶೇಷ ರೀತಿಯಲ್ಲಿ ಪರಿಚಯಿಸಿದ್ದಾರೆ. ಶಿಥಿಲ್ ಪೂಜಾರಿಯನ್ನ ಆಯ್ಕೆ ಮಾಡಿಕೊಂಡಿದ್ದಾರೆ...

ಬಿಡುಗಡೆಯಾಯ್ತು ಮಾರಿಗೆ ದಾರಿ ಫಸ್ಟ್ ಲುಕ್ ಟೀಸರ್!

ಸ್ಯಾಂಡಲ್ ವುಡ್ ಗೆ ಮತ್ತೊಂದು ಹೊಸಾ ತಂಡದ ಆಗಮನವಾಗಿದೆ. 'ಮಾರಿಗೆ ದಾರಿ' ಶೀರ್ಷಿಕೆಯ ಈ ಸಿನಿಮಾವೀಗ ಸದ್ದಿಲ್ಲದೆ ಚಿತ್ರೀಕರಣ ಮುಗಿಸಿಕೊಂಡು, ಫಸ್ಟ್ ಲುಕ್ ಟೀಸರ್ ಅನ್ನು ಬಿಡುಗಡೆಗೊಳಿಸಿದೆ. ಹೊಸತೇನನ್ನೋ ಹೇಳ ಹೊರಟಿರುವಂತೆ ಭಾಸವಾಗುವ ಈ ಟೀಸರ್ನಲ್ಲಿ ಕಥೆಯ ಸುಳಿವನ್ನು ಬಿಟ್ಟು ಕೊಡದೆ, ಹೀರೋ ಕ್ಯಾರೆಕ್ಟರಿನ ಒಂದಷ್ಟು ಚಹರೆಗಳನ್ನು ಪ್ರೇಕ್ಷಕರ ಮುಂದಿಡಲಾಗಿದೆ. ಸದರಿ ಫಸ್ಟ್ ಲುಕ್ ಟೀಸರ್ ಮೂಲಕ ಮಾರಿಗೆ ದಾರಿ ಪಕ್ಕಾ ಮಾಸ್ ಕಂಟೆಂಟ್ ಹೊಂದಿರುವ ಚಿತ್ರವೆಂಬುದನ್ನು ಸಾರಿ ಹೇಳುವಂತಿದೆ.

ಕಥೆ, ಚಿತ್ರಕಥೆ, ಸಂಭಾಷಣೆಯೊಂದಿಗೆ ಈ ಚಿತ್ರವನ್ನು ಅಗಸ್ತ್ಯ ನಿರ್ದೇಶನ ಮಾಡಿದ್ದಾರೆ. ವಿಶೇಷವೆಂದರೆ, ಅವರೇ ನಾಯಕನಾಗಿಯೂ ನಟಿಸಿದ್ದಾರೆ. ಅವರ ಒಂದಷ್ಟು ಲುಕ್ಕುಗಳ ರುಲಕ್ಕುಗಳು ಫಸ್ಟ್ ಲುಕ್ ಟೀಸರ್ ಮೂಲಕ ಜಾಹೀರಾಗಿವೆ. ನೆಲಮೂಲದ ಕಥೆ, ಮಾಸ್ ದೃಷ್ಯಾವಳಿಗಳ ಸುಳಿವಿನೊಂದಿಗೆ ಮೂಡಿ ಬಂದಿರೋ ಈ ಫಸಟ್ ಲುಕ್ ಟೀಸರ್ ಒಂದಷ್ಟು ಆಲೋಚನೆಗೆ ಹಚ್ಚುವಂತಿದೆ. ಈ ಮೂಲಕ ಹೊಸಬರೇ ಸೇರಿಕೊಂಡು ರೂಪಿಸಿರುವ



ಮಾರಿಗೆ ದಾರಿ ಪ್ರೇಕ್ಷಕರನ್ನು ತನ್ನತ್ತ ಸೆಳೆದುಕೊಳ್ಳುತ್ತಿದೆ.

ರಾಧಾ ಫಿಲಂಸ್ ಬ್ಯಾನರಿನಡಿಯಲ್ಲಿ ಈ ಚಿತ್ರ ನಿರ್ಮಾಣಗೊಂಡಿದೆ. ಕನ್ನಡದ ಪ್ರೇಕ್ಷಕರಿಗೆ ತೀರಾ ಫ್ರೆಶ್ ಅನ್ನಿಸುವಂಥಾ ಕಥೆಯೊಂದಿಗೆ ಈ ಸಿನಿಮಾವನ್ನು ರೂಪಿಸಿರೋದಾಗಿ ನಿರ್ದೇಶಕರು ಹೇಳಿಕೊಂಡಿದ್ದಾರೆ.

50 ದಿನ ಪೂರೈಸಿದ 'ಕೆರೆಬೇಟೆ'

ಗೌರಿಶಂಕರ್ ನಟನೆಯ ರಾಜ್ ಗುರು ನಿರ್ದೇಶನದ ಕೆರೆಬೇಟೆ ಸಿನಿಮಾ 50 ದಿನಗಳನ್ನು ಯಶಸ್ವಿಯಾಗಿ ಪೂರೈಸಿದೆ. ಕನ್ನಡ ಸಿನಿಮಾಗಳು ಹಿಟ್ ಆಗುತ್ತಿಲ್ಲ, ಚಿತ್ರಮಂದಿರಕ್ಕೆ ಜನ ಬರ್ತಾ ಇಲ್ಲ ಈ ಪರಿಸ್ಥಿತಿಯಲ್ಲೂ ಕರೆಬೇಟೆ 50 ದಿನ ಪೂರೈಸಿರುವುದು ಖುಷಿಯ ವಿಚಾರ.

ನಿರ್ದೇಶಕ ರಾಜಗುರು ಮತ್ತು ನಾಯಕ ಗೌರಿಶಂಕರ್ ತುಂಬಾ ಕಷ್ಟಪಟ್ಟು ಇಷ್ಟಪಟ್ಟು ಮಾಡಿದ ಸಿನಿಮಾ ಕೆರೆಬೇಟೆ. ಈ ಸಿನಿಮಾ ಭಾರಿ ನಿರೀಕ್ಷೆ ಮತ್ತು ಕುತೂಹಲದೊಂದಿಗೆ ಚಿತ್ರಮಂದಿರಕ್ಕೆ ಎಂಟ್ರಿ ಕೊಟ್ಟಿತ್ತು. ಕುತೂಹಲಕ್ಕೆ ತಕ್ಕಂತೆ ಸಿನಿಮಾ ಕೂಡ ಅದ್ಭುತವಾಗಿ ಮೂಡಿ ಬಂದಿತ್ತು ಆದರೆ ಯಾಕೋ ದೊಡ್ಡಮಟ್ಟದ ಸಕ್ಸಸ್ ಕಾಣಲಿಲ್ಲ. ಈ ಬೇಸರ ಕೂಡಾ ಸಿನಿಮಾ ತಂಡಕ್ಕಿದೆ. ಕಮರ್ಷಿಯಲಿ ದೊಡ್ಡಮಟ್ಟದ ಸಕ್ಸಸ್ ಆಗದಿದ್ದರೂ ಜನರ ಮನ ಗೆದ್ದಿರುವುದು ಸಿನಿಮಾ ತಂಡದ ಶ್ರಮಕ್ಕೆ ಸಿಕ್ಕ ಫಲವಾಗಿದೆ.

ಇದೇ ಖುಷಿಯಲ್ಲಿ ಸಿನಿಮಾ ತಂಡ ಮಾಧ್ಯಮದ ಮುಂದೆ ಹಾಜರಾಗಿತ್ತು. ಸಿನಿಮಾಗಾಗಿ ಶ್ರಮಿಸಿದ ಪ್ರತಿಯೊಬ್ಬರಿಗೂ ಮೊಮೆಂಟುಗಳನ್ನು ಕೊಡುವ ಮೂಲಕ ಸಿನಿಮಾತಂಡ 50 ದಿನ ಪೂರೈಸಿದ ಸಂಭ್ರಮವನ್ನು ಆಚರಿಸಿತು. ಕೆರೆಬೇಟೆಯ ಸಂಭ್ರಮಕ್ಕೆ ನಿರ್ದೇಶಕರಾದ ಶಶಾಂಕ್, ದಯಾಳ್ ಪದ್ಮನಾಭ ಮತ್ತು ನಿರ್ಮಾಪಕ ಉದಯ ಮೆಹ್ತ ನಟ ಪ್ರಥಮ್ ಸಾಕ್ಷಿಯಾದರು.

ಈ ವೇಳೆ ಮಾತನಾಡಿದ ನಾಯಕ ಗೌರಿ ಶಂಕರ್ 'ಸಿನಿಮಾ ಕಮರ್ಷಿಯಲಿ ದೊಡ್ಡ ಮಟ್ಟಕ್ಕೆ ಹಿಟ್ಟಾಗಿಲ್ಲ, ಆದರೆ ಜನ ಒಳ್ಳೆಯ ರಿವ್ಯೂಕೊಟ್ಟಿದ್ದಾರೆ. ಎಲ್ಲೇ ಹೋದರೂ ಕೆರೆಬೇಟೆ ಹೀರೋ ಅಂತ ಗುರುತಿಸುತ್ತಾರೆ. ಕರ್ನಾಟಕದ ಅನೇಕ ಚಿತ್ರಮಂದಿರಗಳಲ್ಲಿ 50 ದಿನಗಳು ಓಡಿದೆ. ಇನ್ನೂ ಕೆಲವು ಚಿತ್ರಮಂದಿರಗಳಲ್ಲಿ ಸಿನಿಮಾ ಇದೆ. ಈ ಖುಷಿಯನ್ನು ನಿಮ್ಮ ಜೊತೆ ಹಂಚಿಕೊಳ್ಳಬೇಕು ಎನ್ನುವ ಕಾರಣಕ್ಕೆ ಐವತ್ತು ದಿನದ ಸಂಭ್ರಮವನ್ನು ಇಟ್ಟುಕೊಂಡಿದ್ದೇವೆ. ಕೆರೆಬೇಟೆ ಸಿನಿಮಾ ನನಗೆ ದೊಡ್ಡ ಕನಸಾಗಿತ್ತು. ಆದರೆ ಸಕ್ಸಸ್ ಆಗದೆ ಇರುವ ಬೇಸರ ಇದೆ. ಇನ್ಮುಂದೆ ಒಳ್ಳೆಯ ಕಥೆ ಬಂದರೆ ನಟಿಸುತ್ತೇನೆ ಅಷ್ಟೆ. ಆದರೆ ಪ್ರೊಡಕ್ಷನ್ ಸದ್ಯಕ್ಕೆ ಮಾಡಲ್ಲ' ಎಂದು ಹೇಳಿದರು.



ನಿರ್ದೇಶಕ ರಾಜಗುರು ಮಾತನಾಡಿ ನನ್ನ ಕನಸನ್ನು ನನಸು ಮಾಡಿದ ಜನಮನ ಸಿನಿಮಾ ಸಂಸ್ಥೆಗೆ ಧನ್ಯವಾದಗಳು. ಈ ಸಿನಿಮಾಗೆ ದೊಡ್ಡ ದೊಡ್ಡ ಡೈರೆಕ್ಟರ್ಗಳು, ಹೀರೋ ಹಾಗೂ ಹೀರೋಯಿನ್ಸ್ ಸಪೋರ್ಟ್ ಮಾಡಿದ್ದಾರೆ. ಎಲ್ಲರಿಗೂ ಧನ್ಯವಾದಗಳು' ಎಂದರು.

ಇನ್ನು ನಾಯಕಿ ಬಿಂದು ಮಾತನಾಡಿ, 'ಈ ಸಿನಿಮಾ ನೋಡಿದ ಎಲ್ಲರೂ ಒಳ್ಳೆಯ ರಿವ್ಯೂ ಕೊಟ್ಟಿದ್ದಾರೆ. ಆ ಖುಷಿ ಇದೆ. ಸಿನಿಮಾ ತಂಡ-ಕ್ಕೆ ಧನ್ಯವಾದಗಳು ಎಂದರು. ಇನ್ನೂ ನಟಿ ಹರಣಿ ಮಾತನಾಡಿ ಧನ್ಯವಾದ ತಿಳಿಸಿದರು.

ಇನ್ನು ನಿರ್ದೇಶಕರಾದ ದಯಾಳ್ ಪದ್ಮನಾಭ್, ಶಶಾಂಕ್, ನಿರ್ಮಾಪಕ ಉದಯ್ ಮೆಹ್ತಾ ಸಿನಿಮಾರಂಗದಲ್ಲಿನ ತಮ್ಮ ಅನುಭವವನ್ನು ಬಿಚ್ಚಿಟ್ಟರು. ಸಿನಿಮಾ ಸಕ್ಸಸ್ ಆಗಿಲ್ಲ ಎನ್ನುವ ಬೇಸರದಲ್ಲಿದ್ದ ನಾಯಕ ಗೌರಿಶಂಕರಿಗೆ ಸಮಾಧಾನ ಮಾಡಿದರು. ಸಿನಿಮಾವನ್ನು ಜನ ಒಪ್ಪಿಕೊಂಡಿದ್ದಾರೆ, ಉತ್ತಮ ರಿವ್ಯೂ ಕೊಟ್ಟಿದ್ದಾರೆ ಇದಕ್ಕಿಂತ ಇನ್ನೇನು ಬೇಕು ಎಂದು ಹೇಳಿದರು. ನಟ ಪ್ರಥಮ್ ಕೂಡ ಮಾತನಾಡಿ 50 ದಿನದ ಸಂಭ್ರಮದಲ್ಲಿ ಬೇಸರದ ಮಾತುಗಳು ಬೇಡ ಎಂದು ಗೌರಿಶಂಕರಿಗೆ ಧೈರ್ಯ ತುಂಬಿದರು.

ಕೆರೆಬೇಟೆ ಸಿನಿಮಾ ಬಗ್ಗೆ ಹೇಳುವುದಾದರೆ ಅಪ್ಪಟ ಹಳ್ಳಿ ಸೊಗಡಿನ ಚಿತ್ರ. ಮಾರ್ಚ್ 15ಕ್ಕೆ ರಾಜ್ಯದ್ಯಂತ ರಿಲೀಸ್ ಆಗಿತ್ತು. ಜನಮನ ಸಿನಿಮಾ ಸಂಸ್ಥೆಯಲ್ಲಿ ಮೂಡಿ ಬಂದಿದ್ದ ಸಿನಿಮಾದಲ್ಲಿ ನಾಯಕ ಗೌರಿಶಂಕರ್, ನಾಯಕಿ ಬಿಂದು ಜೊತೆಗೆ ಗೋಪಾಲ್ ದೇಶಪಾಂಡೆ, ಸಂಪತ್ ಕುಮಾರ್ ಹರಿಣಿ ಸೇರಿದಂತೆ ಅನೇಕ ದೊಡ್ಡ ಕಲಾವಿದರು ಬಣ್ಣ ಹಚ್ಚಿದ್ದರು.

'ಸಿ' ಸಿನಿಮಾದ ಮೆಲೋಡಿ ಹಾಡು ಬಿಡುಗಡೆ

ಬಹುತೇಕ ಹೊಸ ಪ್ರತಿಭೆಗಳೇ ಸೇರಿ ನಿರ್ಮಿಸುತ್ತಿರುವ 'ಸಿ' ಸಿನಿಮಾದ ಬಹುತೇಕ ಕೆಲಸಗಳು ಪೂರ್ಣಗೊಂಡಿದ್ದು, ಸದ್ಯ ಸಿನಿಮಾ ತೆರೆಗೆ ಬರಲು ತಯಾರಾಗುತ್ತಿದೆ. ಇದೇ ವೇಳೆ 'ಸಿ' ಸಿನಿಮಾದ ಪ್ರಚಾರ ಕಾರ್ಯಗಳಿಗೆ ಚಾಲನೆ ನೀಡಿರುವ ಚಿತ್ರತಂಡ, ಇದೀಗ ಸಿನಿಮಾದಲ್ಲಿ ಬರುವ ಹಾಡೊಂದನ್ನು ಬಿಡುಗಡೆ ಮಾಡಿದೆ.

ಇತ್ತೀಚೆಗೆ 'ಸಿ' ಸಿನಿಮಾದ ತಂದೆ-ಮಗಳ ಬಾಂಧವ್ಯದ 'ಕಂದಾ ಕಂದಾ' ಎಂಬ ಸಾಲಿನಿಂದ ಪ್ರಾರಂಭವಾಗುವ ಈ ಗೀತೆಯನ್ನು ನಟ ಆಕ್ಷನ್ ಪ್ರಿನ್ಸ್ ಧ್ರುವ ಸರ್ಜಾ ಹೊರತಂದು, ಚಿತ್ರತಂಡಕ್ಕೆ ಶುಭ ಹಾರೈಸಿದರು. ಗಾಯಕ ವಾಸುಕಿ ವೈಭವ್ ಧ್ವನಿಯಲ್ಲಿ ಮೂಡಿಬಂದಿರುವ ಈ ಹಾಡಿಗೆ ಹೃದಯ ಶಿವ ಸಾಹಿತ್ಯ ಬರೆದಿದ್ದಾರೆ.

ಯುವ ಪ್ರತಿಭೆ ಕಿರಣ್ ಸುಬ್ರಮಣಿ 'ಸಿ' ಸಿನಿಮಾವನ್ನು ನಿರ್ದೇಶಿಸುವುದರ ಜೊತೆಗೆ ನಾಯಕ ನಟನಾಗಿ ತಂದೆಯ ಪಾತ್ರದಲ್ಲಿ ಅಭಿನಯಿಸಿದ್ದಾರೆ. 'ಸಿ' ಸಿನಿಮಾ ತಂದೆ-ಮಗಳ ಬಾಂಧವ್ಯದ ಸುತ್ತ ನಡೆಯುವ ಕಥಾಹಂದರನ್ನು ಹೊಂದಿದ್ದು, ಜೊತೆಗೆ ಮೆಡಿಕಲ್ ಮಾಫಿಯಾದ ಬಗ್ಗೆಯೂ ಸಿನಿಮಾದಲ್ಲಿ ಹೇಳಲಾಗಿದೆ.



'ಎಜಿಎಸ್ ಪ್ರೊಡಕ್ಷನ್' ಬ್ಯಾನರಿನಲ್ಲಿ ಸುಬ್ರಮಣಿ ಈ ಸಿನಿಮಾವನ್ನು ನಿರ್ಮಾಣ ಮಾಡಿದ್ದು, ಶೀಘ್ರದಲ್ಲಿಯೇ ಚಿತ್ರತಂಡ ಸಿನಿಮಾವನ್ನು ತೆರೆಗೆ ತರುವ ಯೋಜನೆಯಲ್ಲಿದೆ.



ಚಿತ್ರದ ಬಗ್ಗೆ ಎಲ್ಲ ಕಡೆಯಿಂದಲೂ ಪಾಸಿಟಿವ್ ವೈಬ್ಸ್ ಬರ್ತಾ ಇದೆ, ನಾನು ಕೂಡ ತುಂಬಾ ಎಕ್ಸೂಟ್ ಆಗಿದ್ದೇನೆ ಎಂದು ಹೇಳಿದರು,

ಕಾರ್ಯಕಾರಿ ನಿರ್ಮಾಪಕರಾದ ಸುಪ್ರೀತ್ ಮಾತನಾಡಿ ಈ ಸಿನಿಮಾ ಸ್ಟಾರ್ಟ್ ಆಗಲು ಕಾರಣ ಪ್ರೇಮ್, ನಾನು ವೆಂಕಟ್ ಅವರ ಬಳಿ ಚರ್ಚೆ ಮಾಡುತ್ತ 'ಧ್ರುವ ಸರ್ಜಾ ಸಿನಿಮಾನ ಯಾರಕ್ಕೆಲಿ ಡೈರೆಕ್ಟ್ ಮಾಡಿಸೋದು ಎಂಬ ಪ್ರಶ್ನೆ ಬಂದಾಗ ಫಸ್ಟ್ ನೆನಪಾದದ್ದು ಪ್ರೇಮ್. ಜನ್ಯ ಅವರು ನಮ್ಮ ಸಿನಿಮಾಗೆ ಕೊಟ್ಟಷ್ಟು ಟೈಮನ್ನು ಯಾವ ಚಿತ್ರಕ್ಕೂ ಕೊಟ್ಟಿಲ್ಲ ಎಂದು ಹೇಳಿದರು. ಅರ್ಜುನ್ ಜನ್ಯ ಮಾತನಾಡಿ ನನ್ನ ಲೈಫ್ ನಲ್ಲೇ ದ ಬೆಸ್ಟ್ ಸಿನಿಮಾ ಇದು. ಭಾರತದ ಎಲ್ಲ ಬೆಸ್ಟ್ ಮ್ಯುಸಿಶಿಯನ್ಸ್ ಪರ್ ಫಾರ್ಮ್ ಮಾಡಿದ್ದಾರೆ. ಈ ಥರದ ಮ್ಯೂಸಿಕ್ ತೆಗೆಸೋದು ಪ್ರೇಮ್ ಕೈಲಷ್ಟೇ ಸಾಧ್ಯ ಎಂದು ಹೇಳಿದರು, ಕೆಡಿ ಚಿತ್ರಕ್ಕೆ ಪ್ರೇಮ್ ಅವರೇ ಕಥೆ, ಚಿತ್ರಕಥೆ, ಸಂಬಾಷಣೆ ಬರೆದು ನಿರ್ದೇಶಿಸಿದ್ದಾರೆ. ಕೆ.ವಿ.ಎನ್. ಪ್ರೊಡಕ್ಷನ್ಸ್ ಬ್ಯಾನರ್ಅಡಿ ನಿರ್ಮಾಣವಾಗಿರೋ ಈ ಚಿತ್ರದಲ್ಲಿ ಧ್ರುವ ಸರ್ಜಾ, ರೀಷ್ಮಾ ನಾಣಯ್ಯ, ರವಿಚಂದ್ರನ್, ರಮೇಶ್ ಅರವಿಂದ್, ಸಂಜಯ್ ದತ್, ಶಿಲ್ಪಾ ಶೆಟ್ಟಿಯಂಥ ದಿಗ್ಗಜ ಕಲಾವಿದರು ನಟಿಸಿದ್ದಾರೆ. ವಿಲಿಯಂ ಡೇವಿಡ್ ಅವರ ಛಾಯಾಗ್ರಹಣ ಕೆಡಿ ಚಿತ್ರಕ್ಕಿದೆ.

17.70 ಕೋಟಿಗೆ ಕೆಡಿ ಆಡಿಯೋ

ಅತಿದೊಡ್ಡ ತಾರಾಗಣ, ಅದ್ಧೂರಿ ಮೇಕಿಂಗ್ನಿಂದಲೇ ಕನ್ನಡ ಚಿತ್ರರಂಗದಲ್ಲಿ ಸಾಕಷ್ಟು ಕುತೂಹಲ, ನಿರೀಕ್ಷೆಗಳನ್ನು ಹುಟ್ಟುಹಾಕಿದ್ದ ಕೆಡಿ ಚಿತ್ರದ ಆಡಿಯೋ ಹಕ್ಕು ಕೂಡ ಆನಂದ್ ಆಡಿಯೋ ಸಂಸ್ಥೆಗೆ ಸೇಲಾಗಿದೆ. ಇದುವರೆಗೂ ತಮ್ಮ ಚಿತ್ರದ ಆಡಿಯೋ ಹಕ್ಕು ಎಷ್ಟು ಮೊತ್ತಕ್ಕೆ ಹೋಗಿದೆ ಎಂದು ಯಾವೊಬ್ಬ ನಿರ್ಮಾಪಕರೂ ಹೇಳಿಕೊಂಡಿದ್ದಿಲ್ಲ. ಆದರೆ ಇದೇ ಮೊದಲಬಾರಿಗೆ ನಿರ್ದೇಶಕ ಪ್ರೇಮ್ ತಮ್ಮ ಕೆಡಿ ಚಿತ್ರದ ಆಡಿಯೋ ಹಕ್ಕುಗಳನ್ನು ಆನಂದ್ ಆಡಿಯೋದವರು 27.70 ಕೋಟಿ ರೂ.ಗಳಿಗೆ ತಗೊಂಡಿದ್ದಾರೆ ಎಂದು ಪ್ರಕಟಿಸಿದ್ದಾರೆ. ಕೆಡಿ ಚಿತ್ರದ ಪತ್ರಿಕಾ ಗೋಷ್ಠಿಯಲ್ಲಿ ಈ ವಿಷಯವನ್ನು ಅವರು ಅಧಿಕೃತವಾಗಿ ಘೋಷಿಸಿದ್ದಾರೆ.

ಸಿನಿಮಾ ಬಗ್ಗೆ ಪ್ರೇಮ್